# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 78 SUNDAY 31-05-2026 PRGI No : KNKAN/26/A0962 Pages:4 Rs.2.00 M: 9742418836


# ಕೈ ಶಾಸಕಾಂಗ ಪಕ್ಷದ ನಾಯಕರಾಗಿ ಡಿ ಕೆ ಶಿವಕುಮಾರ್

ಬೆಂಗಳೂರು: ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ ಕೆ ಶಿವಕುಮಾರ್ ಅವರು ಆಯ್ಕೆ ಆಗಿದ್ದಾರೆ.

ವಿಧಾನಸೌಧ'ದ ಸಮ್ಮೇಳನ ಸಭಾಂಗಣದಲ್ಲಿ ಶನಿವಾರ ನಡೆದ ಸಭೆಯಲ್ಲಿ ನೂತನ ಆಯ್ಕೆ ನಡೆಯಿತು.

ಹೊಸ ಶಾಸಕಾಂಗ ಪಕ್ಷದ ನಾಯಕರಾಗಿ ಡಿ ಕೆ ಶಿವಕುಮಾರ್ ಅವರ ಹೆಸರನ್ನು ಸಿಎಂ ಸಿದ್ದರಾಮಯ್ಯ ಅವರು ಸೂಚಿಸಿದರು.

ಡಾ. ಜಿ ಪರಮೇಶ್ವರ್ ಅವರು ಅನುಮೋದಿಸಿದರು. ಇದನ್ನು ಸಭೆಯು ಒಕ್ಕೊರಲಿನಿಂದ ಬೆಂಬಲಿಸಿತು.

ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ ಕೆ ಶಿವಕುಮಾರ್ ಅವರು ಆಯ್ಕೆಯಾಗಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣು ಗೋಪಾಲ್ ಅವರು ಘೋಷಿಸಿದರು.

ಇದಕ್ಕೂ ಮೊದಲು ಸಭೆಯ ಆರಂಭದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕನ ಆಯ್ಕೆ ಪ್ರಕ್ರಿಯೆಯು ಸಿಎಂ ಸಿದ್ದರಾಮಯ್ಯ ಅವರ ಪ್ರಸ್ತಾವನೆಯೊಂದಿಗೆ ನಡೆಯಲಿದೆ ಎಂದು ಎಐಸಿಸಿ ಮತ್ತೊಬ್ಬ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಪ್ರಕಟಿಸಿ, ಚಾಲನೆ ನೀಡಿದರು.

ಶಾಸಕಾಂಗ ಪಕ್ಷದ ನೂತನ ನಾಯಕನ ಆಯ್ಕೆ ವಿಚಾರವನ್ನು ಎಐಸಿಸಿ ವಿವೇಚನೆಗೆ ಬಿಡಲಾಗಿದೆ ಎಂಬ ಒಂದು ಸಾಲಿನ ನಿರ್ಣಯವನ್ನು ಸಿಎಂ ಸಿದ್ದರಾಮಯ್ಯ ಅವರು ಮಂಡಿಸಿದರು. ಪರಮೇಶ್ವರ್ ಅವರು ಅನುಮೋದಿಸಿದರು. ಎಲ್ಲ ಶಾಸಕರು ಕೈ ಎತ್ತುವ ಮೂಲಕ ಇದನ್ನು ಬೆಂಬಲಿಸಿದರು.

ನಂತರ 10 ನಿಮಿಷಗಳ ವಿರಾಮ ನೀಡಲಾಗಿದೆ ಎಂದು ಸುರ್ಜೆವಾಲ ಹೇಳಿದರು.

ಸಿಎಂ ಸಿದ್ದರಾಮಯ್ಯ, ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ ಅವರು ಸಿಎಂ ಕೊಠಡಿಗೆ ತೆರಳಿದರು.

ಅಲ್ಲಿಂದ ಸಮ್ಮೇಳನ ಸಭಾಂಗಣಕ್ಕೆ ಮೂವರು ವಾಪಸ್ಸು ಬಂದ ನಂತರ ಶಾಸಕಾಂಗ ಪಕ್ಷದ ನೂತನ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿತು.

ನಂತರ ನೂತನ ನಾಯಕ ಡಿ ಕೆ ಶಿವಕುಮಾರ್ ಅವರು ನಿರ್ಗಮಿತ ನಾಯಕ ಸಿದ್ದರಾಮಯ್ಯ ಅವರ ಮುಖ್ಯಮಂತ್ರಿ ಅವಧಿಯ ಸೇವೆಯನ್ನು ಕೊಂಡಾಡುವ ನಿರ್ಣಯ ಮಂಡಿಸಿ, ಸಭೆಯ ಬೆಂಬಲ ಕೋರಿದರು. ಸಭೆ ಒಕ್ಕೋರಲಿನಿಂದ ಬೆಂಬಲಿಸಿತು.




# ಡಿಕೆಶಿ ಪ್ರಮಾಣವಚನಕ್ಕೆ ಮುಹೂರ್ತ ಫಿಕ್ಸ್: ಲೋಕಭವನದಲ್ಲೇ ಸರಳ ಸಮಾರಂಭ



ಬೆಂಗಳೂರು: ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿದ ಬೆನ್ನಲ್ಲಿಯೇ ನೂತನ ಮುಖ್ಯಮಂತ್ರಿ ಆಯ್ಕೆ ಮತ್ತು ಪ್ರಮಾಣವಚನ ಸ್ವೀಕಾರಕ್ಕೆ ಸಿದ್ಧತೆಗಳು ಆರಂಭವಾಗಿವೆ.

ಇಂದು ಸಂಜೆ 4 ಗಂಟೆಗೆ ವಿಧಾನಸೌಧದಲ್ಲಿ ನಡೆಯುವ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರನ್ನು ಅಧಿಕೃತವಾಗಿ ಶಾಸಕಾಂಗ ಪಕ್ಷದ ನಾಯಕನಾಗಿ ಆಯ್ಕೆ ಮಾಡಲಿದ್ದು, ಬುಧವಾರ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಈ ಸಂಬಂಧ ಇಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಮತ್ತು ರಾಜ್ಯಸಭಾ ಸದಸ್ಯ ಜಿ.ಸಿ. ಚಂದ್ರಶೇಖರ್ ಅವರು, ಜೂನ್ 3 ರಂದು ನೂತನ ಮುಖ್ಯಮಂತ್ರಿಯು ಪ್ರಮಾಣವಚನ ಕಾರ್ಯಕ್ರಮ ರಾಜಭವನದ ಗ್ಲಾಸ್ ಹೌಸ್ ನಲ್ಲಿ ಅತ್ಯಂತ ಸರಳವಾಗಿ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಆರಂಭದಲ್ಲಿ ಪ್ರಮಾಣವಚನ ಸಮಾರಂಭದ ಸ್ಥಳದ ಬಗ್ಗೆ ಗೊಂದಲವಿತ್ತು. ಆದರೆ ಅಂತಿಮವಾಗಿ ಲೋಕಭವನದಲ್ಲಿ ನಡೆಸಲು ನಿರ್ಧರಿಸಲಾಯಿತು ಎಂದರು.

ಡಿಕೆ ಶಿವಕುಮಾರ್ ಅವರು ಇದೇ ಮೊದಲ ಬಾರಿಗೆ ಸಿಎಂ ಆಗುತ್ತಿದ್ದರೂ ಸಹ ಯಾವುದೇ ಆಡಂಬರವಿಲ್ಲದೇ ಲೋಕಭವನದಲ್ಲಿ(ರಾಜಭವನ) ಸರಳವಾದ ಕಾರ್ಯಕ್ರಮದಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಚಂದ್ರಶೇಖರ್ ಅವರು ಅಧಿಕೃತವಾಗಿ ಘೋಷಣೆ ಮಾಡಿದ್ದಾರೆ.

ಪ್ರಮಾಣವಚನ ಸಮಾರಂಭಕ್ಕೆ ಸಾರ್ವಜನಿಕರಿಗೆ ಪ್ರವೇಶ ಇಲ್ಲ. ನಾವು ಯಾರಿಗೂ ಯಾವುದೇ ಪಾಸ್ ಗಳನ್ನು ಸಹ ನೀಡುತ್ತಿಲ್ಲ. ತೈಲ ಬೆಲ ಏರಿಕೆ ಆಗಿರುವುದಿಂದ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮ ಬೇಡ ಎಂದು ತೀರ್ಮಾನ ಮಾಡಲಾಗಿದೆ. ಹೀಗಾಗಿ ಯಾರೂ ಸಹ ಬೆಂಗಳೂರಿಗೆ ಬರಬಾರದು ಎಂದು ಮನವಿ ಮಾಡಿದರು.

ದೊಡ್ಡ ಪ್ರಮಾಣದ ಕಾರ್ಯಕ್ರಮಕ್ಕಾಗಿ ಬೆಂಗಳೂರಿಗೆ ಜನರನ್ನು ಕರೆತರಲು ರಾಜ್ಯದ ವಿವಿಧ ಭಾಗಗಳಿಂದ ಸುಮಾರು 10,000 ರಿಂದ 15,000 ಬಸ್‌ಗಳನ್ನು ಕಾಯ್ದಿರಿಸುವ ಬಗ್ಗೆ ಚರ್ಚೆಗಳು ನಡೆದವು. ಆದರೆ ಇಂಧನ ಬಿಕ್ಕಟ್ಟು ಮತ್ತು ಸಂಚಾರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಅದನ್ನು ರದ್ದುಗೊಳಿಸಲಾಯಿತು ಮತ್ತು ಕಾರ್ಯಕ್ರಮವನ್ನು ಸರಳ ರೀತಿಯಲ್ಲಿ ನಡೆಸಬೇಕೆಂದು ಪಕ್ಷ ನಿರ್ದೇಶನ ನೀಡಿದೆ" ಎಂದು ಚಂದ್ರಶೇಖರ್ ಹೇಳಿದರು.

# ಸಪ್ತರ್ಷಿಗಳಿಂದ ಸ್ಥಾಪಿತವಾದ ಕೆಎಲ್‌ಇ ಸಂಸ್ಥೆ ಮಾದರಿಯಾಗಿ ಕಾರ್ಯನಿರ್ವಹಿಸುತ್ತ ದೇಶ ವಿದೇಶಗಳಲ್ಲಿ ಪ್ರಸಿದ್ಧಿ ಪಡೆದಿದೆ



**ಗೋಕಾಕ:** ನಗರದ ಕೆಎಲ್‌ಇ ಸಿ ಎಸ್ ಅಂಗಡಿ ಪದವಿ ಪೂರ್ವ ಮಹಾವಿದ್ಯಾಲಯದ ವಾಣಿಜ್ಯ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿಗಳ ಹಾಗೂ ಪಾಲಕರ ಅಭಿಶಿಕ್ಷಣ ಕಾರ್ಯಕ್ರಮ ಉದ್ಘಾಟಿಸುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಸಪ್ತರ್ಷಿಗಳಿಂದ ಸ್ಥಾಪಿತವಾದ ಕೆಎಲ್‌ಇ ಸಂಸ್ಥೆ ಮಾದರಿಯಾಗಿ ಕಾರ್ಯನಿರ್ವಹಿಸುತ್ತ ದೇಶ ವಿದೇಶಗಳಲ್ಲಿ ಪ್ರಸಿದ್ಧಿ ಪಡೆದಿದೆ ಎಂದು ನಗರದ ಕೆಎಲ್‌ಇ ಸಿ ಎಸ್ ಅಂಗಡಿ ಪಿಯೂ ಕಾಲೇಜಿನ ಆಡಳಿತಾಧಿಕಾರಿ ಜಿ ಎಮ್ ಅಂದಾನಿ ಹೇಳಿದರು.

ಅವರು, ಶನಿವಾರದಂದು ನಗರದ ಕೆಎಲ್‌ಇ ಸಿ ಎಸ್ ಅಂಗಡಿ ಪದವಿ ಪೂರ್ವ ಮಹಾವಿದ್ಯಾಲಯದ ವಾಣಿಜ್ಯ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿಗಳ ಹಾಗೂ ಪಾಲಕರ ಅಭಿಶಿಕ್ಷಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ನಗರದಲ್ಲಿ ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿಯವರ ನೇತ್ರತ್ವದಲ್ಲಿ ಆರೋಗ್ಯ ಹಾಗೂ ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ವಾಣಿಜ್ಯ ವಿದ್ಯಾರ್ಥಿಗಳಿಗೆ ಜಗತ್ತಿನಾದ್ಯಂತ ಹೆಚ್ಚಿನ ಅವಕಾಶಗಳಿವೆ. ಕಠಿಣ ಪರಿಶ್ರಮದಿಂದ ಗುರುಗಳ ಮಾರ್ಗದರ್ಶನದಲ್ಲಿ ಪ್ರಯತ್ನಶೀಲರಾಗಿರಿ. ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರವಂತರಾಗಿ. ಸಂಸ್ಥೆಯ ಸೌಲಭ್ಯಗಳ ಸದುಪಯೋಗದಿಂದ ಸಾಧಕರಾಗಿ ತಮ್ಮ ಬದುಕನ್ನು ರೂಪಿಸಿಕೊಂಡು ತಂದೆ-ತಾಯಿ ಹಾಗೂ ಸಂಸ್ಥೆಗೆ ಕೀರ್ತಿತನ್ನಿರೆಂದು ಹಾರೈಸಿದರು.

ಕಾರ್ಯಕ್ರಮವನ್ನು ಸ್ಥಳೀಯ ಆಡಳಿತ ಮಂಡಳಿ ಅಧ್ಯಕ್ಷ ಎಮ್ ಡಿ ಚುನಮರಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯರಾದ ಎಮ್ ಎನ್ ಕೌಜಲಗಿ, ಅಮೃತ ಜಕ್ಕಲಿ, ಎಮ್ ಎ ಪಾಟೀಲ, ಪಾಲಕರಾದ ಸದಾಶಿವ ಗುದಗೋಳ, ಜ್ಯೋತಿ ಕೋಟ್ಯಾನ, ಲಕ್ಷ್ಮೀ ಕಬ್ಬೂರ ಇದ್ದರು.

# ಬೆಟಗೇರಿಯಲ್ಲಿ ಸಂಭ್ರಮದಿಂದ ಬಕ್ರೀದ್ ಹಬ್ಬ ಆಚರಣೆ



ಬೆಟಗೇರಿ: ಗ್ರಾಮದ ಈದ್ಗಾಮೈದಾನದಲ್ಲಿ ಸಾಮೂಹಿಕಪ್ರಾರ್ಥನೆ ಸಲ್ಲಿಸುತ್ತಿರುವದು.

**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ತ್ಯಾಗ ಬಲಿದಾನ ಹಾಗೂ ಸಹೋದರತ್ವದ ಸಂದೇಶ ಸಾರುವ ಪವಿತ್ರ ಬಕ್ರೀದ್ ಹಬ್ಬವನ್ನು ಮೇ.28ರಂದು ಸ್ಥಳೀಯ ಮುಸ್ಲಿಂ ಸಮುದಾಯದವರು ಭಕ್ತಿಭಾವ, ಸಂಭ್ರಮದಿಂದ ಆಚರಿಸಿದರು. ಇಲ್ಲಿಯ ಮುಸ್ಲಿಂ ಸಮಾಜದವರು ಬಕ್ರೀದ್ ಹಬ್ಬದ ಪ್ರಯುಕ್ತ ಮೇ.28ರಂದು ಮುಂಜಾನೆ 8:30 ಗಂಟೆಗೆ ಅಲ್ಲಾನ ನಾಮಸ್ಮರಣೆ ಮಾಡುತ್ತಾ ಸ್ಥಳೀಯ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಸರ್ವರಿಗೂ ಶಾಂತಿ, ಸೌಹಾರ್ದತೆ ಹಾಗೂ ನೆಮ್ಮದಿ ಮತ್ತು ಸಮೃದ್ಧಿ ದಯಪಾಲಿಸಲಿ ಎಂದು ಬೇಡಿಕೊಂಡ ಬಳಿಕ ಒಬ್ಬರಿಗೊಬ್ಬರೂ ಪರಸ್ಪರ ಆಲಿಂಗಿಸಿ ಶುಭಾಶಯ ವಿನಿಮಯ ಮಾಡಿಕೊಂಡರು.

ಬಕ್ರೀದ್ ಹಬ್ಬದ ಪ್ರಯುಕ್ತ ಬೆಟಗೇರಿ ಗ್ರಾಮದ ಮುಸ್ಲಿಂ ಸಮಾಜದ ಹಿರಿಯರು, ಯುವಕರು ಮತ್ತು ಮಕ್ಕಳು ಹೊಸ ವಸ್ತ್ರ ಧರಿಸಿ ಸಂಭ್ರಮದಿಂದ ಪಾಲ್ಗೊಂಡಿದ್ದರು.

ಮೌಲಾನಾ ನಿಯಾಜ್ ರಾಜೇಖಾನ್, ರಫೀಕ ಮಿರ್ಜಾನಾಯ್ಕು, ಕುತುಬುಸಾಬ ಮಿರ್ಜಾನಾಯ್ಕು, ಜಬ್ಬರ್‌ಸಾಬ ನದಾಫ್, ಬಾಬುಸಾಬ ಮಿರ್ಜಾನಾಯ್ಕು, ಮೀರಾಸಾಬ ನದಾಫ್, ಹಜರತ್ ಮಿರ್ಜಾನಾಯ್ಕು, ಮಲಿಕಸಾಬ ಮಿರ್ಜಾನಾಯ್ಕು, ಶ್ಯಾನೂರ ಮಿರ್ಜಾನಾಯ್ಕು ಸೇರಿದಂತೆ ಸ್ಥಳೀಯ ಮುಸ್ಲಿಂ ಸಮಾಜದ ಮುಖಂಡರು, ಹಿರಿಯರು, ಯುವಕರು, ಮಕ್ಕಳು ಇದ್ದರು.

# ಬಕ್ರೀದ್ ಆಚರಣೆ



ಘಟಪ್ರಭಾ; ಸ್ಥಳೀಯ ಮುಸ್ಲಿಂ ಸಮುದಾಯದ ಬಾಂಧವರು ಬಕ್ರೀದ್ ಹಬ್ಬದ ಪ್ರಯುಕ್ತ ಈದ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಿದರು.

**ಬೆಳಗಾವಿ ವಾರ್ತೆ ಘಟಪ್ರಭಾ:** ಪಟ್ಟಣದಲ್ಲಿ ಮುಸ್ಲಿಂ ಬಾಂಧವರು 'ಈದು ಲ್ ಅಝ್‌ಹಾ' ಬಕ್ರೀದ್ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಿದರು.

ಗುರುವಾರ ಪಟ್ಟಣದ ಹೊರವಲದಲ್ಲಿರುವ ಈದ್ಗಾದಲ್ಲಿ ಮೌಲನಾ ಅಬ್ದುಲ್ ಗಫೂರ ನಯಿಮಿ ಇವರ ನೇತೃತ್ವದಲ್ಲಿ ಸಮೋಹಿಕ ಪ್ರಾರ್ಥನೆ ಸಲ್ಲಿಸಿದರು.

ಮುಸ್ಲಿಂ ಬಂಧವರು ಪರಸ್ಪರ ಹಬ್ಬದ ಶುಭಾಶಯಗಳನ್ನು ಕೋರಿದರು. ಚಿಕ್ಕ ಚಿಕ್ಕ ಮಕ್ಕಳು ಹೊಸ ಉಡುಪುಗಳನ್ನು ಧರಿಸಿಕೊಂಡು ಮೆರವಣಿಗೆ ಮೂಲಕ ಈದ್ಗಾಗೆ ತೆರಳಿ ಸಾಮೂಹಿಕ ನಮಾಜ ಮಾಡಿ ಶಾಂತಿ ಸೌಹಾರ್ದತೆಗಾಗಿ ಪ್ರಾರ್ಥನೆ ಸಲ್ಲಿಸಿದರು.

ಸ್ಥಳೀಯ ಮುಸ್ಲಿಂ ಸಮಾಜದ ಹಿರಿಯರು, ಯುವಕರು, ಮುಖಂಡರು ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ಜನರು ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ಸತೀಶ ಜಾರಕಿಹೊಳಿ ಅವರಿಗೆ ಕೆಪಿಸಿಸಿ ಅಧ್ಯಕ್ಷ ಪದವಿಯೊಂದಿಗೆ ಉನ್ನರ ಹುದ್ದೆ ನೀಡುವಂತೆ ಇಲ್ಲಿಯ ಭೋವಿ ವಡ್ಡರ ವೇಲ್ಫೇರ್ ಸೋಸೈಟಿಯವರು ನಗರದ ಲಕ್ಷ್ಮೀದೇವಿಗೆ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಲಕ್ಷ್ಮಣ ಗಾಡಿವಡ್ಡರ, ಹನಮಂತ ಸಾಗರ, ಭರಮಣ್ಣ ಗಾಡಿವಡ್ಡರ, ಕಲ್ಲೋಳೆಪ್ಪ ಗಾಡಿವಡ್ಡರ, ಶೆಟ್ಟೆಪ್ಪ ಗಾಡಿವಡ್ಡರ, ಪರಶುರಾಮ ಗಾಡಿವಡ್ಡರ, ಹನಮಂತ ಮನವಡ್ಡರ, ಸಂಜು ಬಂಡಿವಡ್ಡರ, ವಿವೇಕ ಜತ್ತಿ ಇದ್ದರು.

# ಬಾಕಿ ಇರುವ ದಂಡದ ಮೊತ್ತವನ್ನು ಶೀಘ್ರ ಪಾವತಿಸಲು ಸಾರ್ವಜನಿಕರಲ್ಲಿ ಮನವಿ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ನಗರದಾದ್ಯಂತ ಇರುವ ಸ್ವಯಂ ಚಾಲಿತ ಸಿ.ಸಿ.ಟಿ.ವಿ ಕ್ಯಾಮರಾಗಳಲ್ಲಿ ಸಾರ್ವಜನಿಕರು ಸಂಚಾರ ನಿಯಮ ಉಲ್ಲಂಘನೆ ಮಾಡಿದ ಬಗ್ಗೆ ಮೋಟಾರ ವಾಹನ ಪ್ರಕರಣಗಳು ದಾಖಲಾಗಿರುತ್ತವೆ. ಆದ್ದರಿಂದ ಸಾರ್ವಜನಿಕರು ಕೂಡಲೇ ಬಾಕಿ ಇರುವ ದಂಡದ ಮೊತ್ತವನ್ನು ಕರ್ನಾಟಕ ಒನ್ ಆನ್‌ಲೈನ್ ಮುಖಾಂತರ ಅಥವಾ ಸಂಚಾರ ಠಾಣೆಯ ಎ.ಎಸ್.ಐ ಮೇಲ್ಪಟ್ಟ ಅಧಿಕಾರಿಗಳ ಬಳಿ ಅಥವಾ ಟಿ.ಎಂ.ಸಿ ಕೇಂದ್ರ ಧಾರವಾಡ ಸಂಚಾರ ಠಾಣೆಯಲ್ಲಿ ಖುದ್ದಾಗಿ ಬಂದು ದಂಡ ಪಾವತಿ ಮಾಡಬೇಕೆಂದು ಸಂಚಾರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಶ್ರೀನಿವಾಸ ಮೇಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಬೆಳಗಾವಿ ವಾರ್ತೆ ಘಟಪ್ರಭಾ:** ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಘಟಪ್ರಭಾ ಪೊಲೀಸ್ ಠಾಣೆಯಲ್ಲಿ ಸುಮಾರು ಐದಾರು ವರ್ಷಗಳಿಂದ ಸೇವೆಸಲ್ಲಿಸಿ ಬೇರೆ ಠಾಣೆಗೆ ವರ್ಗಾವಣೆ ಆಗಿರುವ ಐಎಸ್.ಆಯ್ ಮಲೀಕಜಾನ ದೇವಡಿ ಹಾಗೂ ಪೊಲೀಸ್ ಸಿಬ್ಬಂದಿ ರಾಜು ಧುಮಾಳೆ ಇವರಿಗೆ ಮುಸ್ಲಿಂ ಸಮಾಜದ ಅಹಲೆ ಸುನ್ನತ್ ವಲ್ ಜಮಾತ್ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು.

ಈ ಸಂಧರ್ಭದಲ್ಲಿ ಘಟಪ್ರಭಾ ಪೊಲೀಸ್ ಠಾಣೆಯ ಎಚ್.ಡಿ. ಮುಲ್ಲಾ, ಜಾಮಿಯಾ ಮಸಜಿದ ಅಧ್ಯಕ್ಷ ರಾದ ಶೌಕತ ಕಬ್ಬೂರ, ಹಿರಿಯರಾದ ಕುತಬುದ್ದೀನ ಕಡಲಗಿ, ಮುಸ್ತಾಕ ಖಾಜಿ, ನೂರ್ ಪೀರಜಾದೆ, ಸಲೀಮ್ ಕಬ್ಬೂರ ಸೇರಿದಂತೆ ಅನೇಕರು ಇದ್ದರು.

# ಸರಳತೆ ಮತ್ತು ಶರಣರ ನಡೆ-ನುಡಿ ಜನಸಾಮಾನ್ಯರಿಗೆ ದೇವರನ್ನು ಹತ್ತಿರವಾಗಿಸಿತು



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಯಜ್ಞ, ಯಾಗಾದಿಗಳು ಹಾಗೂ ಅದ್ದೂರಿ, ಆಡಂಬರದ ಖರ್ಚುಗಳ ಮೂಲಕ ಜನಸಾಮಾನ್ಯರಿಗೆ ನಿಲುಕದ ಗಗನ ಕುಸುಮವಾಗಿದ್ದ ದೇವರ ಅಸ್ತಿತ್ವವನ್ನು 12 ನೇ ಶತಮಾನದ ಬಸವಾದಿ ಶರಣರು ತಮ್ಮ ಸರಳ ನಡೆ, ನುಡಿ ಮತ್ತು ವಚನಗಳ ಮೂಲಕ ಅತ್ಯಂತ ಸರಳಗೊಳಿಸಿದರು ಎಂದು ಮಹಾ ಮನೆ ಬಳಗದ ಅಧ್ಯಕ್ಷ ಎಸ್.ಎ.ಬೇವಿನಗಿಡದ ಹೇಳಿದರು.

ಪಟ್ಟಣದ ವಿಶ್ವಕರ್ಮ ಬಡಾವಣೆಯಲ್ಲಿರುವ ಮಹಾಬಲೇಶ್ವರ ಗಡೇದ ಅವರ ನಿವಾಸದಲ್ಲಿ ಹಮ್ಮಿಕೊಂಡಿದ್ದ 1057 ನೇ "ಮನೆಯಲ್ಲಿ ಮಹಾಮನೆ" ಕಾರ್ಯಕ್ರಮದಲ್ಲಿ ಶರಣ ಗುರುಪುರದ ಮಲ್ಲಯ್ಯನವರ ವಚನ ವಿಶ್ಲೇಷಿಸಿ ಅವರು ಮಾತನಾಡಿದರು.

12ನೇ ಶತಮಾನವು ಕನ್ನಡದ ನೆಲದಲ್ಲಿ ಅಚ್ಚಳಿಯದ ತಿರುವು ಪಡೆದುಕೊಂಡ ಅಪೂರ್ವ ಯುಗವಾಗಿದೆ. ಸಾಮಾಜಿಕ ಮತ್ತು ಧಾರ್ಮಿಕ ಚಿಂತನೆಗಳಿಗೆ ಹೊಸ ತಿರುವು ಕೊಟ್ಟ ಕಾಲವಿದು. ಅಂದು ಶ್ರೀಮಂತರ ಸ್ವತ್ತಾಗಿದ್ದ ದೇವರು, ಆಚಾರ, ವಿಚಾರ, ಸಂಪ್ರದಾಯ ಹಾಗೂ ಆಧ್ಯಾತ್ಮಿಕ ನೆಲೆಯನ್ನು ಶರಣರು ಸಂಪೂರ್ಣವಾಗಿ ಬದಲಿಸಿದರು. ಅಕ್ಷರ ಜ್ಞಾನವಿಲ್ಲದ ಸಾಮಾನ್ಯ ಜನ ಹಾಗೂ ಮಹಿಳೆಯರು ಶ್ರೇಷ್ಠ ಮಟ್ಟದ ವಚನಗಳನ್ನು ರಚಿಸಿದ್ದಲ್ಲದೆ, ಬರೆದಂತೆಯೇ ತಮ್ಮ ಜೀವನವನ್ನು ರೂಪಿಸಿಕೊಂಡು ಮಾದರಿಯಾದರು ಎಂದು ತಿಳಿಸಿದರು.

**ಗಣ್ಯರಿಗೆ ಸನ್ಮಾನ:** ಇದೇ ಸಂದರ್ಭದಲ್ಲಿ 'ಕಾಯಕ ಯೋಗಿ' ಪ್ರಶಸ್ತಿ ಪುರಸ್ಕೃತರಾದ ಮಹಾಬಲೇಶ್ವರ ಗಡೇದ, ಹಿರಿಯರಾದ ಶಿವಲಿಂಗಪ್ಪ ಗಡೇದ ಹಾಗೂ ಬಿ.ಎಂ. ರಾಂಪೂರ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಸಭೆಯನ್ನುದ್ದೇಶಿಸಿ ಶರಣ ಬಸಪ್ಪ ಗಡೇದ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ದಾನಪ್ಪ ನಾಗಠಾಣ, ಹಸಿರು ತೋರಣ ಬಳಗದ ಅಧ್ಯಕ್ಷ ಅಮರೇಶ ಗೂಳಿ, ಎನ್.ಎಸ್. ಹಿರೇಮಠ, ಬಸವರಾಜ ನಾಲತವಾಡ, ಬಸವರಾಜ ಕೋರಿ, ಎಸ್.ಎಚ್. ಪಾಟೀಲ, ಎಚ್.ಬಿ. ದಳವಾಯಿ, ಸಂಗಣ್ಣ ಕಂಚ್ಯಾಣಿ, ಎಸ್.ಆರ್. ಗೌಡರ, ಎಂ.ಎಸ್. ಬಿರಾದಾರ, ಚಂದ್ರಶೇಖರ ಪ್ಯಾಟಿಗೌಡರ, ಶ್ರೀಶೈಲ ಕತ್ತಿ, ಕೆ.ಆರ್. ಕಾಮಟೆ, ಬಿ.ಎಂ. ಪಲ್ಲೇದ, ಎನ್.ಎಸ್. ಮಠ, ಜಿ.ಆರ್. ಕಲಬುರ್ಗಿ, ಈರಣ್ಣ ಶಿರವಾಳ, ಅಶೋಕ ರೇವಡಿ, ನಾಗಭೂಷಣ ನಾವದಗಿ, ರವಿ ಗೂಳಿ, ಶ್ರೀ ಶೈಲ ಮರೋಳ, ಅಮರೇಶ ಐಹೊಳೆ, ಬಸಲಿಂಗಪ್ಪ ಕಟ್ಟಿ, ಎಂ.ಬಿ. ಪಾಟೀಲ, ದೇವೇಂದ್ರ ಪತ್ತಾರ, ಡಾ. ಬೋರಮ್ಮ ಪೊಲೀಸ್ ಪಾಟೀಲ, ಸುಲೋಚನ ಸಜ್ಜನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಂಗಮೇಶ ಶಿವಣಗಿ, ಬಾಪುಗೌಡ ಪಾಟೀಲ, ಎನ್.ಆರ್. ಮೊಕಾಶಿ ಮತ್ತು ಎಸ್.ಎಸ್. ಹುನಗುಂದ ಬಸವ ನೆನಹು ಹಾಗೂ ಪ್ರಾರ್ಥನೆ ನಡೆಸಿಕೊಟ್ಟರು. ಮಲ್ಲಿಕಾರ್ಜುನ ಗಡೇದ ಸ್ವಾಗತಿಸಿದರು. ಬಿ.ಎಸ್. ಮೇಟಿ ಕಾರ್ಯಕ್ರಮ ನಿರೂಪಿಸಿದರು.

# ಸರ್ವರ್ ಸಮಸ್ಯೆಯಿಂದ ಪಡಿತರ ವಿತರಣೆಯಲ್ಲಿ ಗೊಂದಲ: ತಕ್ಷಣ ಕ್ರಮ ಕೈಗೊಳ್ಳಲು ಆಗ್ರಹ



**ಬೆಳಗಾವಿ ವಾರ್ತೆ ವಿಜಯಪುರ:** ನಗರದ ನ್ಯಾಯಬೆಲೆ ಅಂಗಡಿಗಳಲ್ಲಿ ಕಳೆದ ಕೆಲವು ದಿನಗಳಿಂದ ಪಡಿತರ ವಿತರಣೆಯ ಸರ್ವರ್ ಸಮಸ್ಯೆ ತೀವ್ರವಾಗಿ ಎದುರಾಗುತ್ತಿದ್ದು, ಇದರಿಂದ ಸಾರ್ವಜನಿಕರು ಹಾಗೂ ನ್ಯಾಯಬೆಲೆ ಅಂಗಡಿಕಾರರು ಸಾಕಷ್ಟು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಭೀಮ್ ರಾಜ್ಯ ದಲಿತ ಸೇವಾ ಸಮಿತಿ (ರಿ) ತಿಳಿಸಿದೆ.

ಸರ್ವರ್ ಕೈಕೊಡುತ್ತಿರುವ ಕಾರಣ ಪಡಿತರ ವಿತರಣೆ ಪ್ರಕ್ರಿಯೆ ವಿಳಂಬವಾಗುತ್ತಿದ್ದು, ಫಲಾನುಭವಿಗಳು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ಹಾಗೂ ಆಕ್ರೋಶ ಹೆಚ್ಚುತ್ತಿದೆ. ಜೊತೆಗೆ ಬಯೋಮೆಟ್ರಿಕ್ ಪ್ರಕ್ರಿಯೆಯಲ್ಲೂ ವಿಳಂಬ ಉಂಟಾಗುತ್ತಿದ್ದು, ನ್ಯಾಯಬೆಲೆ ಅಂಗಡಿಕಾರರು ಸಾರ್ವಜನಿಕರ ನಿಂದನೆ ಹಾಗೂ ಒತ್ತಡ ಎದುರಿಸುವಂತಾಗಿದೆ.

ಈ ಸಮಸ್ಯೆ ಕೇವಲ ವಿಜಯಪುರ ಜಿಲ್ಲೆಗೆ ಸೀಮಿತವಾಗಿರದೇ, ರಾಜ್ಯಾದ್ಯಂತ ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಇದಲ್ಲದೆ ಬೇರೆ ಜಿಲ್ಲೆ, ತಾಲೂಕು ಹಾಗೂ ಬೇರೆ ನ್ಯಾಯಬೆಲೆ ಅಂಗಡಿಗಳ ಪಡಿತರ ಚೀಟಿದಾರರು ವಿಜಯಪುರ ನಗರ ವ್ಯಾಪ್ತಿಯ ಅಂಗಡಿಗಳಿಗೆ ಬಂದು ಪಡಿತರ ಪಡೆಯುತ್ತಿರುವುದರಿಂದ ಹೆಚ್ಚುವರಿ ಒತ್ತಡ ನಿರ್ಮಾಣವಾಗಿದೆ. ಆದರೆ ಸಂಬಂಧಿಸಿದ ಇಲಾಖೆಯಿಂದ ಅಗತ್ಯ ಹೆಚ್ಚುವರಿ ಅಲಾನ್‌ಮೆಂಟ್ ಬಿಡುಗಡೆ ಆಗದ ಕಾರಣ ಪಡಿತರ ವಿತರಣೆಯಲ್ಲಿ ಗೊಂದಲ ಉಂಟಾಗಿದೆ.

ಆದ್ದರಿಂದ ಪಡಿತರ ವಿತರಣೆಯ ಸರ್ವರ್ ಸಮಸ್ಯೆಯನ್ನು ತಕ್ಷಣ ಸರಿಪಡಿಸಿ, ಅಗತ್ಯ ಪ್ರಮಾಣದ ಹೆಚ್ಚುವರಿ ಅಲಾನ್‌ಮೆಂಟ್ ಬಿಡುಗಡೆ ಮಾಡಲು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಭೀಮ್ ರಾಜ್ಯ ದಲಿತ ಸೇವಾ ಸಮಿತಿ (ರಿ) ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ನಾಗರಾಜ ಕಬಾಡೆ, ರಾಜ್ಯ ಅಧ್ಯಕ್ಷ ಅಪ್ಪುರಾಜ್ ನಿಮಾದಾರ, ಅರುಣ ಗುಜ್ಜರ, ಮಹದೇವ ಪಂಗಡವಾಲೆ, ಗೌಳಿ ಮಹದೇವ್ ಕೊಪ್ಪದ್, ಅಬ್ದುಲ್ಲಾ ಹಕ್ ಇನಾಮದಾರ, ಸುರೇಂದ್ರ ಕುಲಕರ್ಣಿ, ವಿಜಯಕುಮಾರ ನಿಮದಾರ್, ಸೋಮಶೇಖರ್ ಕಬಾಡೆ, ಗಿರೀಶ್ ಕುಲಕರ್ಣಿ, ನವೀನ್ ಕೊಪ್ಪದ್ ಹಾಗೂ ಶ್ರೀಶೈಲ್ ಪಡ್ನಾಡ್ ಉಪಸ್ಥಿತರಿದ್ದರು.

# ಮಾಂಸದ ಅಂಗಡಿ ಸ್ಥಳಾಂತರಕ್ಕೆ ಆಗ್ರಹಿಸಿ ಪ್ರತಿಭಟನೆ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಐತಿಹಾಸಿಕ ಪ್ರಸಿದ್ಧವಾದ ಶ್ರೀ ಸೋಮೇಶ್ವರ ದೇವಸ್ಥಾನದ ದಕ್ಷಿಣ ದ್ವಾರದ ಸಮೀಪವೇ ಮೀನು ಮತ್ತು ಮಾಂಸದ ಅಂಗಡಿಗಳಿದ್ದು ಅವುಗಳನ್ನು ಸ್ಥಳಾಂತರಿಸುವಂತೆ ಒತ್ತಾಯಿಸಿ ಶ್ರೀರಾಮ ಸೇನೆ ಹಿಂದೂ ಪರ ಸಂಘಟನೆಗಳು ಮತ್ತು ಪಟ್ಟಣದ ನಾಗರಿಕರು ನೂರಾರು ಸಂಖ್ಯೆಯಲ್ಲಿ ಪ್ರತಿಭಟನೆ ನಡೆಸಿ ಮುಖ್ಯಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿಂದೂ ಮುಖಂಡರುಗಳು ಪವಿತ್ರವಾದ ದೇವಸ್ಥಾನದ ಹಿಂಬದಿಯಲ್ಲಿಯೇ ಅನೇಕ ವರ್ಷಗಳಿಂದ ಮಾಂಸದ ಅಂಗಡಿಗಳಿದ್ದು ಅವುಗಳನ್ನು ಸ್ಥಳಾಂತರಿಸುವಂತೆ ಅನೇಕ ಬಾರಿ ಮನವಿ ಕೊಟ್ಟಿದ್ದರು ಯಾರದೋ ಹಿತಾಸಕ್ತಿಗಾಗಿ ಮತ್ತು ಒತ್ತಡಕ್ಕೆ ಪುರಸಭೆಯವರು ಅವುಗಳನ್ನು ತೆರವುಗೊಳಿಸುತ್ತಿಲ್ಲ ಶ್ರದ್ಧಾ ಮತ್ತು ಭಕ್ತಿ ಕೇಂದ್ರವಾದ ಶ್ರೀ ಸೋಮೇಶ್ವರ ದೇವಸ್ಥಾನದ ಸಮೀಪದ ಅಂಗಡಿಗಳನ್ನು ಒಂದು ತಿಂಗಳೊಳಗೆ ತೆರವು ಗೊಳಿಸದಿದ್ದರೆ ಮುಂದಾಗುವ ಯಾವುದೇ ಅನಾಹುತಕ್ಕೂ ಪುರಸಭೆ ಮತ್ತು ಜಿಲ್ಲಾ ಆಡಳಿತವೇ ನೇರ ಹೊಣೆಯಾಗುತ್ತದೆ ಎಂದು ಎಚ್ಚರಿಸಿದರು.

ಮನವಿ ಪತ್ರ ಸ್ವೀಕರಿಸಿದ ಮುಖ್ಯ ಅಧಿಕಾರಿ ಅವರು ಆಡಳಿತಾಧಿಕಾರಿಗಳಿಗೆ ಮತ್ತು ಜಿಲ್ಲಾಧಿಕಾರಿ ಗಮನಕ್ಕೆ ತಂದು ಒಂದು ತಿಂಗಳೊಳಗೆ ಕ್ರಮ ಕೈಗೊಳ್ಳುವ ಭರವಸೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನೆಯ ಈರಣ್ಣ ಪೂಜಾರ, ಕುಬೇರಪ್ಪ ಮಹಾಂತ, ಶೆಟ್ಟರ್ ಚಂಬಣ್ಣ, ಬಾಳಿಕಾಯಿ ಬಸವೇಶ್, ಮಹಂತ್ ಶೆಟ್ಟರ್, ಗಂಗಾಧರ ಮೆಣಸಿನಕಾಯಿ, ವಿಜಯ ಹತ್ತಿಕಾಳ ಸೇರಿದಂತೆ ಮೊದಲಾದವರು ಇದ್ದರು.



# ಮೇ 27 ರಂದು ವಾಲ್ಮಿ ಸಭಾಂಗಣದಲ್ಲಿ ಜರುಗಿದ ನೀರಾವರಿ ಯೋಜನೆಗಳ ಕಾರ್ಯಕ್ಷಮತೆ ಅಧ್ಯಯನ ಸಮಿತಿ ಸಭೆ

**ಬೆಳಗಾವಿ ವಾರ್ತೆ ಧಾರವಾಡ:** ಜಲಸಂಪನ್ಮೂಲ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಯ ಅಡಿಯಲ್ಲಿನ ಏತ ನೀರಾವರಿ ಯೋಜನೆ ಗಳು (ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿ ಸುವ), ಕೆರೆ ತುಂಬಿಸುವ ಯೋಜನೆಗಳ ಮತ್ತು ಸೂಕ್ಷ್ಮ ನೀರಾವರಿ ಯೋಜನೆಗಳ ಕಾರ್ಯಕ್ಷಮತೆ ಅಧ್ಯಯನಕ್ಕಾಗಿ ಸರ್ಕಾರ ವು ಕರ್ನಾಟಕ ವಿಧಾನ ಪರಿಷತ್ ಶಾಸಕ ರಾದ ಎಸ್. ರವಿ ಅವರ ಅಧ್ಯಕ್ಷತೆಯಲ್ಲಿ 18 ಜನ ಶಾಸಕರು, ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ.

ಈ ಸಮಿತಿಯ 11ನೇ ಸಭೆಯನ್ನು ಧಾರವಾಡದ ವಾಲ್ಮಿ ಸಂಸ್ಥೆಯ ಸಭಾಂಗಣದಲ್ಲಿ ಮೇ 27, 2026 ರಂದು ಏರ್ಪಡಿಸಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಶಾಸಕ ಯು.ಬಿ. ಬಣಕಾರ್ ಅವರು ವಹಿಸಿದ್ದರು ಮತ್ತು ಶಾಸಕರು, ಸದಸ್ಯರುಗಳಾದ ಸಿಮೆಂಟ್ ಮಂಜು, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ನಿರಾಣಿ ಹನುಮಂತ್ ರುದ್ರಪ್ಪ ಅವರ ಉಪಸ್ಥಿತಿಯಲ್ಲಿ ಸಭೆ ಜರುಗಿತು.

ಸಭೆಯಲ್ಲಿ ಧಾರವಾಡ ವಲಯಕ್ಕೆ ಸಂಬಂಧಿಸಿದ ಬಾಗಲಕೋಟೆ, ಗದಗ, ಧಾರವಾಡ, ಬೆಳಗಾವಿ, ಹಾವೇರಿ ಮತ್ತು ಬೆಳಗಾವಿ ವಲಯಕ್ಕೆ ಸಂಬಂಧಿಸಿದ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಯ ಪ್ರಸ್ತುತ ಕಾರ್ಯನಿರ್ವ ಹಿಸುತ್ತಿರುವ, ಪ್ರಗತಿಯಲ್ಲಿರುವ ಮತ್ತು ದುರಸ್ತಿಯಲ್ಲಿರುವ ಏತ ನೀರಾವರಿ ಯೋಜ ನೆಗಳು ಮತ್ತು ಕೆರೆ ತುಂಬಿಸುವ ಯೋಜ ನೆಗಳ ಕಾರ್ಯ ಕ್ಷಮತೆಯ ಕುರಿತಂತೆ ಸಂಬಂಧಿಸಿದ ಎಲ್ಲ




ಅಧಿಕಾರಿಗಳ ಜೊತೆ ವಿವರವಾಗಿ ಚರ್ಚಿಸಲಾಯಿತು. ಏತ ನೀರಾವರಿ ಯೋಜನೆಯ ವಿನ್ಯಾ ಸಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲ ಭ್ಯ ಒದಗಿಸಲು ಮತ್ತು ಎಲ್ಲ ಕೆರೆ ತುಂಬುವ ಯೋಜನೆಗಳ ವಿನ್ಯಾಸಿತ ಕೆರೆಗಳನ್ನು ನಿಗದಿ ತ ಅವಧಿಯಲ್ಲಿ ತುಂಬಿಸುವದಕ್ಕಾಗಿ ಕ್ರಮ ವಹಿಸಲು ಸಮಿತಿ ಸದಸ್ಯರು ಸೂಚಿಸಿದರು. ಯೋಜನೆಗಳ ವಾರ್ಷಿಕ ವಿದ್ಯುತ್ ಶುಲ್ಕ ಮತ್ತು ನಿರ್ವಹಣೆ ವೆಚ್ಚದ ಕೊರತೆ ಯನ್ನು ಸರಿದೂಗಿಸಲು ಇಲಾಖೆ ವತಿಯಿ ಂದ ಕೈಗೊಳ್ಳಬಹುದಾದ ಕ್ರಮದ ಕುರಿತು ಮತ್ತು ಏತ ನೀರಾವರಿ ಯೋಜನೆಗಳ ನೀರು ಬಳಕೆದಾರ ಸಂಘಗಳ ರಚನೆ ಮಾಡಿ ನೀರಾವರಿ ಕರ ವಸೂಲಾತಿ ಮತ್ತು ಕೆರೆ ತುಂಬು ಯೋಜನೆಗಳಿಂದ ಕೆರೆಗಳಲ್ಲಿ ಮೀ ನುಗಾರಿಕೆ ವಹಿಸಿ, ಆದಾಯವನ್ನು ಕ್ರೂ ಢೀಕರಿಸುವ ಕುರಿತು ಚರ್ಚಿಸಲಾಯಿತು.

ಅಧಿಕಾರಿಗಳ ಕೋರಿಕೆಯಂತೆ ಈ ಯೋಜನೆಗಳ ನಿರಂತರ ಕಾರ್ಯಕ್ಷಮತೆಗಾಗಿ ನಿರ್ವಹಣೆ ಅನುದಾನದ ಕೊರತೆ ಮತ್ತು ವಿದ್ಯುತ್ ಶುಲ್ಕ ನಿಗದಿತ ಅವಧಿಯಲ್ಲಿ ಪಾವತಿಸಲು ಕ್ರಮ ವಹಿಸುವ ಕುರಿತಂತೆ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಮತ್ತು ತಾತ್ಕಾಲಿಕವಾಗಿ ನಿಷ್ಕ್ರಿಯವಾಗಿರುವ ಯೋಜನೆಗಳಿಗೆ ಅನುದಾನ ಒದಗಿಸಲು ಕೂಡ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು. ಪ್ರಗತಿಯಲ್ಲಿರುವ ಎಲ್ಲ ಏತ ನೀರಾವರಿ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ವಿನ್ಯಾಸಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಸಭೆಯಲ್ಲಿ ಸೂಚಿಸಿದರು.

ಮಲಪ್ರಭಾ, ಘಟಪ್ರಭಾ, ಭದ್ರಾ, ವಿಜಯನಗರ ಕಾಲುವೆ ಹಾಗೂ ಗೊಂದಿ ಯೋಜನೆಯ ನೀರು ಬಳಕೆದಾರರ ಸಹಕಾರಿ ಸಂಘದ ಮಹಾಮಂಡಳಗಳ ಕಾರ್ಯವೈಖರಿ, ನಿರ್ವಹಣೆ ಕುರಿತಾಗಿ ಮಹಾಮಂಡಳಗಳ ಅಧ್ಯಕ್ಷರು ತಮ್ಮ ಪ್ರಾತ್ಯಕ್ಷತೆಯನ್ನು ಪ್ರಸ್ತುತಪಡಿಸಿದರು.

ಗೊಂದಿ ಯೋಜನೆಯ ನೀರು ಬಳಕೆದಾರರ ಸಹಕಾರಿ ಸಂಘದ ಮಹಾಮಂಡಳದ ಕಾರ್ಯವೈಖರಿ ಕುರಿತು ಸಭೆಯಲ್ಲಿ ಶ್ಲಾಘನೆ ವ್ಯಕ್ತಪಡಿಸಿದರು ಮತ್ತು ಇದರಂತೆ ಕಾರ್ಯನಿರ್ವಹಿಸಲು ಎಲ್ಲ ಮಹಾಮಂಡಳಗಳ ಅಧ್ಯಕ್ಷರುಗಳಿಗೆ ಸಮಿತಿ ಸೂಚಿಸಿತು.

ನೆಲ ಮತ್ತು ಜಲ ನಿರ್ವಹಣೆ ಸಂಸ್ಥೆ ಮತ್ತು ಅಚುಕಟ್ಟು ನೀರಾವರಿ ಪ್ರಾಧಿಕಾರದವರು ರೈತರು ನೀರನ್ನು ಮಿತವಾಗಿ ಬಳಸಿಕೊಂಡು ಬೆಳೆ ಇಳುವರಿ ಹೆಚ್ಚಿಸುವ ವಿಧಾನಗಳ ಬಗ್ಗೆ ಹಾಗೂ ಆಧುನಿಕ ಕೃಷಿ ಪದ್ಧತಿ ಬಗ್ಗೆ ಮತ್ತು ನೀರು ಬಳಕೆ ಸಹಕಾರ ಸಂಘಗಳ ರಚನೆ ಹಾಗೂ ಬಲವರ್ಧನೆ ಮಾಡಿ ನೀರಿನ ಕರವಸೂಲಾತಿ ಮಾಡುವ ಬಗ್ಗೆ ಹಾಗೂ ರೈತರ ಸಹಭಾಗಿತ್ವದಲ್ಲಿ ನೀರು ನಿರ್ವಹಣೆ ಮಾಡುವ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಸಭೆಯಲ್ಲಿ ಸಮಿತಿಯ ಅಧ್ಯಕ್ಷರ ತಾಂತ್ರಿಕ ಸಲಹೆಗಾರ ಹಾಗೂ ಕಾವೇರಿ ನೀರಾವರಿ ನಿಗಮದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಶಂಕರೇಗೌಡ, ನಿವೃತ್ತ ಮುಖ್ಯ ಇಂಜಿನಿಯರ ಚೆಲುವರಾಜ್, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಅಮ್ಮಿನಭಾವಿ ಮತ್ತು ಯೋಜನೆಗಳಿಗೆ ಸಂಬಂಧಿಸಿದ ಮುಖ್ಯ ಇಂಜಿನಿಯರರು ಮತ್ತು ಎಲ್ಲ ತಾಂತ್ರಿಕ ಅಧಿಕಾರಿ ವರ್ಗದವರು ಭಾಗವಹಿಸಿದ್ದರು.

# ಕೆಸರುಗದ್ದೆಯಾದ ರಸ್ತೆ



**ಬೆಳಗಾವಿ ವಾರ್ತೆ ಶಿರಹಟ್ಟಿ:** ತಾಲೂಕಿನ ಮೊದಲ ಗ್ರಾಮವಾದ ಮಾಗಡಿ ಯಿಂದ ತಾಲೂಕ ಕೇಂದ್ರ ಸ್ಥಳಕ್ಕೆ ಸಂಪರ್ಕಿಸುವ ಲೋಕೋಪಯೋಗಿ ಇಲಾಖೆಯ ಜಿಲ್ಲಾ ಮುಖ್ಯ ರಸ್ತೆ ಯ ಸುಮಾರು 400 ಮೀಟರ್ ರಸ್ತೆಕೆಸರು ಗದ್ದೆಓಟಕ್ಕೆ ಹೇಳಿ ಮಾಡಿಸಿದಂತಿದೆ.

ಮಾಗಡಿ ಗ್ರಾಮದ ಸಿಸಿ ರಸ್ತೆಯಿಂದ ಸುಮಾರು 400 ಮೀಟರ್ ರಸ್ತೆ ಈ ಮಳೆಗಾಲದಲ್ಲಿ ವಾಹನಗಳ ಸಂಚರಿಸುವುದೇ ದುಸ್ತರ ಎನ್ನುವಂತಾಗಿದೆ ಎಲ್ಲೆಂದರಲ್ಲಿ ಗುಂಡಿಗಳು ಬಿದ್ದು ಇಡೀ ರಸ್ತೆ ಅಸ್ತಿಪಂಜರದಂತಾಗಿದೆ.

ಬೇಸಿಗೆಯಲ್ಲಿ ಲೋಕೋಪಯೋಗಿ ಇಲಾಖೆಯವರು ಕೊನೆಯ ಪಕ್ಷ ಗುಂಡಿಗಳನ್ನಾದರೂ ತುಂಬಿ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕಾಗಿತ್ತು .ಈ ಜಿಲ್ಲಾ ಮುಖ್ಯ ರಸ್ತೆಯ 400 ಮೀಟರ್ ದಾಟುವುದೇ ಹರಸಾಹಸವಾಗಿದೆ.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಗರಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಒತ್ತಾಯಿಸಿ ಕನ್ನಡ ಹೋರಾಟಗಾರರ ಸಮಿತಿಯ ಸದಸ್ಯರು ಪಾಲಿಕೆಯ ಆವರಣದಲ್ಲಿ ಎಮ್ಮೆಯೊಂದಿಗೆ ಭಿತ್ತಿಪತ್ರಗಳನ್ನು ಹಿಡಿದು ಪ್ರತಿಭಟನೆ ನಡೆಸಿ ಮಹಾಪೌರರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ವಿರೇಶ ಜಿಗಳೂರ, ಈರಪ್ಪ ಎಮ್ಮಿ, ರಮೇಶ ಹಳ್ಳಿಕೇರಿ, ಮೌನೇಶ ಅಂಬಿಗೇರ, ಖಾಜಾಸಾಬ ಅಸ್ಲಾಂ, ಪ್ರಕಾಶ ನಾಯ್ಕ, ಸಂಜೀವ ದುಮಕನಾಳ, ಶೇಖರಯ್ಯ ಮಠಪತಿ ಮುಂತಾದವರು ಇದ್ದರು.

# ಶ್ರದ್ಧಾಭಕ್ತಿಯಿಂದ ಬಕ್ರೀದ್ ಆಚರಣೆ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಮುಸ್ಲಿಂ ಬಾಂಧವರ ಪವಿತ್ರ ಹಬ್ಬವಾದ ಬಕ್ರೀದ್ ಹಬ್ಬವನ್ನು ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಿದರು. ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಈದ್ಗಾ ಮೈದಾನದಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ಮಾಡಿದರು.

ಈ ಸಂದರ್ಭದಲ್ಲಿ ಧರ್ಮ ಗುರು ಮೊಹಮ್ಮದ್ ಆಫೀಜ್ ಶಕೀಲ್ ಅವರು ಪ್ರವಚನ ನೀಡಿದರು . ಪ್ರತಿಯೊಬ್ಬರು ಜೀವನದಲ್ಲಿ ದೇವರು ಧರ್ಮ ನಂಬಿಕೆ ವಿಶ್ವಾಸ ಉಳಿಸಿಕೊಂಡು ಧರ್ಮ ಪಾಲಕರಾಗಿ ಕೈಲಾದ ಮಟ್ಟಿಗೆ ಬಡವರಿಗೆ ಸಹಾಯ ಮಾಡುವ ಮೂಲಕ ಜೀವನವನ್ನು

ಸಾಮೂಹಿಕ ಪ್ರಾರ್ಥನೆಯಲ್ಲಿ ಅಂಜುಮನ್ ಎ ಇಸ್ಲಾಂ ಸಮಿತಿಯ ಅಧ್ಯಕ್ಷ ಎಂಎಂ ಗದಗ ದಾದಾಪೀರ್ ಮುಚ್ಚಾಲೆ ಕರೀಂ ಸಾಬ್ ಸುರಣಗಿ ಯುನೋ ಚೌರಿ ಎನ್ ಎಂ ಗದಗ ಸಾಹೇಬ್ ಜಾನ್ ಹವಾಲ್ದಾರ್ ಕರೀಮ್ ಖಾನ್ ಕರೀಂ ಖಾನ್ ವರ ಜಾಕಿರ್ ಹುಸೇನ್ ಹವಾಲ್ದಾರ್ ಸೇರಿದಂತೆ ಸಾವಿರಾರು ಮುಸ್ಲಿಂ ಬಾಂಧವರು ಪಾಲ್ಗೊಂಡಿದ್ದರು.



## ವಿವಿಧ ಕಾರ್ಯಕ್ರಮ: ಕಲಾವಿದರಿಂದ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ವಿಜಯನಗರ(ಹೊಸಪೇಟೆ):** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2026–27 ನೇ ಸಾಲಿನಲ್ಲಿ ಚಿಗುರು, ಯುವಸೌರಭ, ಸಾಂಸ್ಕೃತಿಕ ಸೌರಭ ಹಾಗೂ ಇತರೆ ವಿವಿಧ ಕಾರ್ಯಕ್ರಮಗಳನ್ನು ಮುಂದಿನ ದಿನಗಳಲ್ಲಿ ಹಮ್ಮಿಕೊಳ್ಳಲಾಗುವುದು. ಕಾರ್ಯಕ್ರಮಗಳಿಗೆ ಇಲಾಖೆಯಿಂದ ಕಲಾವಿದರನ್ನು ಆಯ್ಕೆ ಮಾಡಲಾಗುತ್ತಿದ್ದು, ಜಿಲ್ಲೆಯ ಆಸಕ್ತ ಕಲಾವಿದರು ತಮ್ಮ ಕಲೆಯ ಸಂಕ್ಷಿಪ್ತ ವಿವರದೊಂದಿಗೆ ಹೊಸಪೇಟೆಯ ತಾಲೂಕು ಆಡಳಿತ ಕಚೇರಿ ಕಟ್ಟಡದಲ್ಲಿ ಇರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಜೂನ್ 10ರ ಒಳಗಾಗಿ ತಮ್ಮ ಪ್ರಸ್ತಾವನೆಗಳನ್ನು ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08394200198 ಗೆ ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ್ ರಂಗಣ್ಣನವರ ತಿಳಿಸಿದ್ದಾರೆ.

# ಸ್ವಚ್ಛತಾ ಕಾರ್ಯ



**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಬೇಸಿಗೆಯ ರಜೆ ಮುಗಿದು ಇನ್ನೇನು 2026–27ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭೋತ್ಸವಕ್ಕೆ ಕ್ಷಣಗಣನೆ ಆರಂಭವಾಗಿದ್ದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ನಿರ್ದೇಶನದಂತೆ ತಾಲೂಕಿನ ಎಲ್ಲ ಸರ್ಕಾರಿ ಕಿರಿಯ ಹಿರಿಯ ಮತ್ತು ಹೆಣ್ಣುಮಕ್ಕಳ ಸರ್ಕಾರಿ ಕನ್ನಡ ಶಾಲೆಗಳಲ್ಲಿ ಶಿಕ್ಷಕರು ಸ್ವಚ್ಛತಾ ಕಾರ್ಯಗಳನ್ನು ಕೈಗೊಂಡಿದ್ದಾರೆ.

ಪಟ್ಟಣದ ಸರ್ಕಾರಿ ಹಿರಿಯ ಹೆಣ್ಣುಮಕ್ಕಳ ಶಾಲೆಯಲ್ಲಿ ಮುಖ್ಯೋಪಾಧ್ಯಾಯ ಬಸವರಾಜ್ ಕುಂಬಾರ್ ಅವರ ನೇತೃತ್ವದಲ್ಲಿ ಸಿಬ್ಬಂದಿಗಳು ನಿನ್ನೆ ಶಾಲಾ ಕೊಠಡಿಗಳ ಸ್ವಚ್ಛತೆ ಆವರಣಗಳ ಸ್ವಚ್ಛತೆ ನೀರಿನ ಟ್ಯಾಂಕರ್ ಬಿಸಿಯೂಟದ ಅಡುಗೆ ಮನೆ ಅದರ ಪರಿಕರಗಳು ಶೌಚಾಲಯ ಮೂತ್ರಾಲಯ ಮತ್ತು ಸ್ವಚ್ಛತಾ ಕಾರ್ಯಗಳನ್ನು ಕೈಗೊಂಡರು.

ಜೂನ್ 1 ರಿಂದ ಶಾಲೆಗಳ ಪ್ರಾರಂಭೋತ್ಸವ ಜರಗಲಿದ್ದು ವಿದ್ಯಾರ್ಥಿಗಳ ದಾಖಲಾತಿ ಆಂದೋಲನ ಸೇತುಬಂಧ ಪರೀಕ್ಷೆಗಳು ಸೇರಿದಂತೆ ಮೊದಲ ದಿನವೇ ಶಾಲೆಗೆ ಬರುವ ಮಕ್ಕಳಿಗೆ ಶಾಲಾ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳ ವಿತರಣೆಯನ್ನು ಮಾಡಲು ಎಲ್ಲಾ ಸಿದ್ಧತೆಯನ್ನು ಮಾಡಿಕೊಳ್ಳಲಾಗಿದೆ ಎಂದು ಮುಖ್ಯೋಪಾಧ್ಯಾಯರು ಹೇಳಿದರು.

ಈ ಕುರಿತಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಎನ್‌ಎಚ್ ನಾಯಕ ಅವರು ಶಿರಹಟ್ಟಿ ಮತ್ತು ಲಕ್ಷೇಶ್ವರ ತಾಲೂಕಿನ ಎಲ್ಲಾ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಅನುದಾನಿತ ಶಾಲೆಗಳಲ್ಲಿ ಸಮವಸ್ತ್ರ ಪಠ್ಯಪುಸ್ತಕಗಳು ವಿತರಣೆಗೆ ಎಲ್ಲಾ ಕ್ರಮ ಕೈಗೊಂಡಿದ್ದು ಈಗಾಗಲೇ ಪುಸ್ತಕಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

# ಅನಧಿಕೃತ ಲಾಟರಿ ಮಟಕಾ ವಿರುದ್ಧ ಕಠಿಣ ಕ್ರಮ ವಹಿಸಿ

**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಮಟ್ಕಾ ಪ್ರಕರಣ ಗಳಲ್ಲಿ ಭಾಗಿಯಾಗುವವರ ಮೇಲೆ ಕಾನೂ ನು ರೀತಿಯಾಗಿ ಕಠಿಣ ಕ್ರಮ ಕೈಗೊಳ್ಳುವು ದಾಗಿ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಮೇ 21 ರಂದು ಜರುಗಿದ 2025–26 ನೇ ಸಾಲಿನ ನಾಲ್ಕನೇ ತ್ರೈಮಾಸಿಕ (ಜನೇವರಿ 2026 ರಿಂದ ಮಾರ್ಚ್ 2026 ರವರೆಗೆ) ಫ್ಲೈಯಿಂಗ್ ಸ್ಕಾಡ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಮಟ್ಕಾ ಪ್ರಕರಣಗಳಲ್ಲಿ ಬಾಕಿ ಇರುವ ಪ್ರಕರಣಗಳು ವಿಚಾರಣೆ ಹಂತದಲ್ಲಿದ್ದು, ಅವುಗಳನ್ನು ಶೀಘ್ರ ಇತ್ಯರ್ಥಪಡಿಸಬೇಕು. ವಾಣಿಜ್ಯ ತೆರಿಗೆ ಇಲಾಖೆಯು ಜಿಎಸ್‌ಟಿ ಕಾಯ್ದೆಯಡಿ ಕಾರ್ಯನಿರ್ವಹಿಸುತ್ತಿದ್ದು ಗಡಿಪಾರು ಮಾಡಿರುವ ಆರೋಪಿತರ ಆರ್ಥಿಕ ಸ್ಥಿತಿಗತಿಯ ಬಗ್ಗೆ ಪರಿಶೀಲನೆ ನಡೆಸಿ ತಮ್ಮ ಕಾರ್ಯವ್ಯಾಪ್ತಿಯಡಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿವೈಎಸ್‌ಪಿ ಮಹಾಂತೇಶ ಸಜ್ಜನ ಅವರು ಮಾತನಾಡಿ ಜನೆವರಿ 2026 ರ ಮಾಹೆಯಲ್ಲಿ ಮುಂಡರಗಿ ಪೋಲೀಸ್ ಠಾಣೆ ವ್ಯಾಪ್ತಿಯ ಬಸವರಾಜ ತಂದೆ ಮೈಲಪ್ಪ ದೊಡ್ಡಮನಿ ಸಾ:ಡಂಬಳ, ವಯಸ್ಸು 21 ಇವರನ್ನು ವಿಜಯನಗರ ಜಿಲ್ಲೆ ಕೂಡ್ಲಿಗಿ ಪೋಲೀಸ್ ಠಾಣೆಗೆ ಮತ್ತು ಶಿರಹಟ್ಟಿ ಪೋಲೀಸ್ ಠಾಣೆ ವ್ಯಾಪ್ತಿಯ ವಿರುಪಾಕ್ಷಪ್ಪ ತಂದೆ ಶಂಕ್ರಪ್ಪ ಸಂಗಪ್ಪ ಶೆಟ್ಟರ, ಸಾ:ಶಿರಹಟ್ಟಿ ವಯಸ್ಸು 58 ಇವರನ್ನು ವಿಜಯನಗರ ಜಿಲ್ಲೆ ಕೊಟ್ಟೂರು ಪೋಲೀಸ್ ಠಾಣೆಗೆ ಗಡಿಪಾರು ಮಾಡಿ ಆದೇಶಿಸಿರುವ ಬಗ್ಗೆ ಸಭೆಗೆ ಮಾಹಿತಿ ಸಲ್ಲಿಸಿದರು ಹಾಗೂ ಮೂರಕ್ಕಿಂತ ಹೆಚ್ಚು ಮಟಕಾ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿತರನ್ನು ಗಡಿಪಾರು ಶಿಕ್ಷೆಗೆ ಒಳಪಡಿಸುತ್ತಿರುವ ಹಿನ್ನೆಲೆಯಲ್ಲಿ ಮಟಕಾ ಪ್ರಕರಣಗಳು ಇಳಿಮುಖವಾಗುತ್ತಿವೆ ಎಂದು ತಿಳಿಸಿದರು.

ಸಭೆಯಲ್ಲಿ ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ–ಋಣ ನಿರ್ವಹಣೆ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರ ಚಿನಗುಂಡಿ, ಅಭಿವೃದ್ಧಿ ಅಧಿಕಾರಿ ನಾಗರಾಜ ಉಪ್ಪಾರ, ವಾಣಿಜ್ಯ ತೆರಿಗೆ ಇಲಾಖೆ (ಜಾರಿ–2) ರಾಜಶೇಖರಯ್ಯ ಕಾಲವಾಡಮಠ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಹತ್ಯೆಯಾದ ದಲಿತ ಯುವಕನ ಮನೆಗೆ ತಾಲೂಕಾಡಳಿತ ಭೇಟಿ: ಜಿಲ್ಲಾಧಿಕಾರಿಗಳೇ ಬರುವಂತೆ ಆಗ್ರಹಿಸಿ ಅಧಿಕಾರಿಗಳೊಂದಿಗೆ ದಲಿತ ಮುಖಂಡರ ಮಾತಿನ ಚಕಮಕಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ :** ಈಚೆಗೆ ನಡೆದ ಬಸವನಬಾಗೇವಾಡಿ ತಾಲ್ಲೂಕಿನ ಹಂಗರಗಿ ಗ್ರಾಮದ ಎನ್.ಎಸ್. ಪೂಜಾರಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ರವಿಚಂದ್ರ ಮಾದರ ಎಂಬ ಯುವಕನ ಹತ್ಯೆಯಾಗಿದೆ ಎನ್ನಲಾದ ಆರೋಪಕ್ಕೆ ಸಂಬಂಧಿಸಿದಂತೆ, ಯುವಕನ ಸ್ವಗ್ರಾಮವಾದ ನಾಗರಬೆಟ್ಟಕ್ಕೆ ತಾಲೂಕಾಧಿಕಾರಿಗಳ ತಂಡ ಭೇಟಿ ನೀಡಿತು.ಈ ಸಂದರ್ಭದಲ್ಲಿ ತಾಲೂಕಾಡಳಿತದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ ದಲಿತ ಮುಖಂಡರು ಹಾಗೂ ಅಧಿಕಾರಿಗಳ ಮಧ್ಯೆ ತೀವ್ರ ಮಾತಿನ ಚಕಮಕಿ ನಡೆಯಿತು.

ಒಬ್ಬ ಬಡ ದಲಿತ ಯುವಕನ ಹತ್ಯೆಯಾಗಿ ನಾಲ್ಕು ದಿನಗಳ ಕಳೆದ ನಂತರ ಅಧಿಕಾರಿಗಳು ಬರುವ ಅವಶ್ಯಕತೆ ಏನಿದೆ? ನಮಗೆ ಜಿಲ್ಲಾಧಿಕಾರಿಗಳೇ ಸ್ಥಳಕ್ಕೆ ಬರಬೇಕು, ಅವರೊಂದಿಗೇ ನಾವು ಮಾತನಾಡುತ್ತೇವೆ. ದಲಿತರಿಗೆ ಬೆಲೆ ಇಲ್ಲವೇ? ನಮಗೂ ಕಾನೂನಿನ ಅರಿವಿದೆ, ನ್ಯಾಯಕ್ಕಾಗಿ ಹೋರಾಟ ಮಾಡುತ್ತೇವೆ ಎಂದು ಗ್ರಾಮಸ್ಥರು ಮತ್ತು ಮುಖಂಡರು ಆಕ್ರೋಶ ಹೊರಹಾಕಿದರು.

**ಕುಟುಂಬಕ್ಕೆ ಸಾಂತ್ವನ – 8 ಲಕ್ಷ ಪರಿಹಾರದ ಭರವಸೆ:** ನಂತರ ಅಧಿಕಾರಿಗಳು ಮುಖಂಡರನ್ನು ಸಮಾಧಾನಪಡಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು. ಸ್ಥಳಕ್ಕೆ ಆಗಮಿಸಿದ್ದ ತಹಶೀಲ್ದಾರ್ (ದಂಡಾಧಿಕಾರಿಗಳು) ಕೀರ್ತಿ ಚಾಲಕ, ತಾ.ಪಂ ಇಓ ಸಂಗನಗೌಡ ಬಿರಾದಾರ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಬಸಂತಿ ಮಠ, ಕಂದಾಯ ನಿರೀಕ್ಷಕ ವಿ.ವಿ. ಅಂಬಿಗೇರ ಹಾಗೂ ತಾ.ಪಂ ಸಹಾಯಕ ಲೆಕ್ಕಾಧಿಕಾರಿ ವೀರೇಶ ಹೂಗಾರ ಅವರು ನೊಂದ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಈ ವೇಳೆ ಮಾತನಾಡಿದ ಅಧಿಕಾರಿಗಳು, "ನಡೆದ ಘಟನೆ ನಮಗೂ ತೀವ್ರ ನೋವು ತಂದಿದೆ. ಹತ್ಯೆಯಾದ ಯುವಕನ ಕುಟುಂಬದ ಓರ್ವ ಸದಸ್ಯರಿಗೆ ಸರ್ಕಾರಿ ಕೆಲಸ ನೀಡುವಂತೆ ಮೇಲಧಿಕಾರಿಗಳಿಗೆ ಶಿಫಾರಸು ಮಾಡುತ್ತೇವೆ. ಸದ್ಯಕ್ಕೆ ಪರಿಹಾರದ ರೂಪದಲ್ಲಿ ಒಟ್ಟು 8 ಲಕ್ಷ ರೂ. ಮೊತ್ತದ ಹಣದ ಚೆಕ್ ಅನ್ನು ಎರಡು ಹಂತಗಳಲ್ಲಿ ಶನಿವಾರದೊಳಗೆ ವಿತರಿಸಲಾಗುವುದು. ಇಂತಹ ಘಟನೆಗಳಿಗೆ ಸರ್ಕಾರ ನ್ಯಾಯ ಒದಗಿಸಲು ನಿಮ್ಮ ಬೆನ್ನಿಗೆ ನಿಲ್ಲಲಿದೆ. ಯಾವುದೇ ಕಾರಣಕ್ಕೂ ರೊಚ್ಚಿಗೊಳದೆ ಶಾಂತಿ ಕಾಪಾಡಬೇಕು" ಎಂದು ಮನವಿ ಮಾಡಿಕೊಂಡರು.

**ಆಹಾರ ಕಿಟ್ ವಿತರಣೆಗೆ ಸೂಚನೆ:** ನೊಂದ ಕುಟುಂಬಕ್ಕೆ ತಕ್ಷಣವೇ ಅಗತ್ಯ ಆಹಾರ ಸಾಮಗ್ರಿಗಳ ಕಿಟ್ ನೀಡಬೇಕು ಎಂದು ಸ್ಥಳದಲ್ಲಿದ್ದ ಗ್ರಾ.ಪಂ ಕಾರ್ಯದರ್ಶಿ ಅಯ್ಯಪ್ಪ ಮಲಗಲದಿನ್ನಿ ಅವರಿಗೆ ತಹಶೀಲ್ದಾರ್ ಕೀರ್ತಿ ಚಾಲಕ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಮಲ್ಲು ತಳವಾರ,ತಿಪ್ಪಣ್ಣ ದೊಡ್ಡಮನಿ, ಯಲ್ಲಪ್ಪ ಚಲವಾದಿ, ಹುಲಗಪ್ಪ ಮಾದರ, ದೇವಪ್ಪ ಮಾದರ, ಚಂದ್ರು ಮಾದರ, ಪ್ರಭು ಮಾದರ ಸೇರಿದಂತೆ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳಕ್ಕೆ ಮಕ್ಕಳ ರಚಿತ ಮತ್ತು ಪ್ರಕಟಣೆಗೊಂಡ ಪುಸ್ತಕಗಳ ಆಹ್ವಾನ


ಧಾರವಾಡ: ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಕೇಂದ್ರ ಕಛೇರಿಯಿಂದ ರಾಜ್ಯಮಟ್ಟದ ಮಕ್ಕಳ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳುವ ಪ್ರಯುಕ್ತ ಮಕ್ಕಳು ರಚಿಸಿದ ಪ್ರಕಟಣೆಗೊಂಡ ಪುಸ್ತಕಗಳನ್ನು ಅಹ್ವಾನಿಸಲಾಗಿದೆ.

ಆಸಕ್ತ ಮಕ್ಕಳು ಅಕಾಡೆಮಿ ಕೇಂದ್ರ ಕಛೇರಿಗೆ ಸ್ವವಿವರಗಳನ್ನೊಳಗೊಂಡ ಪುಸ್ತಕವನ್ನು ಜೂನ್ 10, 2026 ರೊಳಗಾಗಿ ಯೋಜನಾಧಿಕಾರಿಗಳು, ಚಂದ್ರಿಕಾ ಲೇಔಟ್ ಹಿಂಭಾಗ ಕೆ.ಎಚ್.ಬಿ ಕಾಲೋನಿಲಕಮನಹಳ್ಳಿ ಧಾರವಾಡ ಕೇಂದ್ರ ಕಚೇರಿ ವಿಳಾಸಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2465490 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

# ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ತಾಂತ್ರಿಕ ತೊಡಕಗಳು ಅಡ್ಡಿಯಾಗದಿರಲಿ: ರೆಡ್ಡಿ ಶ್ರೀನಿವಾಸ




**ಬೆಳಗಾವಿ ವಾರ್ತೆ ಕೊಪ್ಪಳ:** ರಾಜ್ಯ ಸರ್ಕಾರವು ಜಾರಿ ಮಾಡಿದ ಶಕ್ತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಅನುಷ್ಠಾನವಾಗುತ್ತಿವೆ. ಯೋಜನೆಗಳ ಅನುಷ್ಠಾನದಲ್ಲಿ ಎದುರಾಗುವ ಕೆಲವೊಂದು ತಾಂತ್ರಿಕ ತೊಡಕುಗಳನ್ನು ಪೂರ್ಣ ಪ್ರಮಾಣದಲ್ಲಿ ಸರಿಪಡಿಸುವ ಪ್ರಯತ್ನದ ಭಾಗವಾಗಿ ಆಯಾ ಯೋಜನೆಗಳ ಅನುಷ್ಠಾನಾ ಧಿಕಾರಿಗಳು ಪಂಚಾಯತಿವಾರು ಪ್ರಗತಿ ಪರಿಶೀಲನಾ ಸಭೆ ನಡೆಸಿ, ಆಯಾ ಯೋಜನೆಗಳ ಫಲಾನುಭವಿಗಳ ಬಳಿ ಮುಕ್ತವಾಗಿ ಮಾತ ನಾಡಬೇಕು. ಫಲಾನುಭವಿಗಳು ಹೇಳುವ ತಾಂತ್ರಿಕ ತೊಂದರೆಗಳ ಇತ್ಯರ್ಥಕ್ಕೆ ಹೆಚ್ಚಿನ ಗಮನ ಕೊಡಬೇಕು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಹೇಳಿದರು.

ಕೊಪ್ಪಳ ಜಿಲ್ಲಾ ಪಂಚಾಯತ್‌ನ ಸಮಿತಿ ಸಭಾಂಗಣದಲ್ಲಿ ಮೇ 29ರಂದು ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೇಷನ್ ಅಥವಾ ಆಧಾರ್ ಕಾರ್ಡನಲ್ಲಿ ಹೆಸರುಗಳಲ್ಲಿನ ವ್ಯಾತ್ಯಾಸದಂತಹ ತಾಂತ್ರಿಕ ಕಾರಣಗಳಿಂದಾಗಿ ಕೆಲ ಫಲಾನುಭವಿಗಳಿಗೆ ಸಕಾಲಕ್ಕೆ ಅವರ ಖಾತೆಗೆ ಹಣ ಜಮೆ ಆಗುವುದಿಲ್ಲ. ವಿದ್ಯುತ್ ಬಿಲ್ ಕಟ್ಟಿದ್ದರು ಸಹ ಬಿಲ್ ಬಾಕಿ ತೋರಿಸುವಂತಹ ವಿದ್ಯುತ್ ಮೀಟರ್ ಬಗೆಗಿನ ತಾಂತ್ರಿಕ ತೊಂದರೆ ಇತ್ಯರ್ಥವಾಗಬೇಕು. ನ್ಯಾಯಬೆಲೆ ಅಂಗಡಿಗಳಿಗೆ ಸರಿಯಾದ ಸಮಯಕ್ಕೆ ಅಕ್ಕಿ ತಲುಪುವಂತೆ ನೋಡಿಕೊಳ್ಳಬೇಕು. ಎಲ್ಲ ಕಾರ್ಡುದಾರರ ಮೊಬೈಲ್ ಸಂಖ್ಯೆ ಮತ್ತು ಆಧಾರ್ ಕಾರ್ಡ್ ಲಿಂಕ್ ಆಗುವುದಕ್ಕೆ ಮೊದಲಾದ್ಯತೆ ನೀಡಬೇಕು ಎಂದು ಆಯಾ ಯೋಜನೆಗಳ ಅನುಷ್ಠಾನಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೊಪ್ಪಳ, ಕುಷ್ಟಗಿ, ಗಂಗಾವತಿ, ಕಾರಟಗಿ, ಕನಕಗಿರಿ, ಯಲಬುರ್ಗಾ, ಕುಕನೂರ ಸೇರಿದಂತೆ ಜಿಲ್ಲೆಯ ಎಲ್ಲ ಕಡೆಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಉತ್ತಮವಾಗಿ ಅನುಷ್ಠಾನವಾಗುತ್ತಿವೆ. ಶಕ್ತಿ ಯೋಜನೆ ಅನುಷ್ಠಾನವು ಜಾಗತಿಕ ದಾಖಲೆ ಬರೆದಿದೆ. ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ಮೇ 19ರವರೆಗೆ ದಾಖಲೆಯ 726 ಕೋಟಿ ಪ್ರಮಾಣದಲ್ಲಿ ಮಹಿಳೆಯರು ಪ್ರಯಾಣಿಸಿ ಸಾರಿಗೆ ನಿಗಮವು 18,943 ಕೋಟಿ ಆದಾಯ ಗಟ್ಟಿಸಿದೆ. ಕೊಪ್ಪಳ ಜಿಲ್ಲೆಯಲ್ಲಿ ಇದುವರೆಗೆ 11.59 ಕೋಟಿ ಪ್ರಮಾಣದಲ್ಲಿ ಮಹಿಳೆಯರು ಪ್ರಯಾಣಿಸಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೊಪ್ಪಳ ವಿಭಾಗದ ಆದಾಯ 431 ಕೋಟಿ ರೂ.ಗೆ ಹೆಚ್ಚಿದೆ. ರಾಜ್ಯ ಸರ್ಕಾರದ ಯೋಜನೆಗಳ ಜನಪ್ರಿಯತೆಗೆ ಇದು ಸಾಕ್ಷಿಯಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ನೋಂದಾಯಿಸಿಕೊಂಡ 3,07,972 ಗೃಹಲಕ್ಷ್ಮಿ ಫಲಾನುಭವಿಗಳಿಗೆ ಇದುವರೆಗೆ 1791 ಕೋಟಿ ರೂ. ವ್ಯಯಿಸಲಾಗಿದೆ. ಆಗಸ್ಟ್ 2023ರಿಂದ ಏಪ್ರೀಲ್ 2025ರವರೆಗೆ ಜಿಲ್ಲೆಯಲ್ಲಿನ ಅರ್ಹ 2,89,369 ಗೃಹ ಜ್ಯೋತಿ ಫಲಾನುಭವಿಗಳಿಗೆ 402 ಕೋಟಿ ರೂ ಸಬ್ಸಿಡಿ ನೀಡಲಾಗಿದೆ. ಅದೇ ರೀತಿ ಜಿಲ್ಲೆಯಲ್ಲಿನ ಯುವನಿಧಿ ಯೋಜನೆಯ 14,404 ಫಲಾನುಭವಿಗಳಿಗೆ ಜನವರಿ 26ರವರೆಗೆ 30.32 ಕೋಟಿ ರೂ.ವೆಚ್ಚ ಮಾಡಲಾಗಿದೆ. 2026 ಮೇ ಮತ್ತು ಜೂನ್ ಮಾಹೆಯಲ್ಲಿ ಜಿಲ್ಲೆಯಲ್ಲಿನ ಅನ್ನಭಾಗ್ಯ ಯೋಜನೆಯ 3,63,504 ಫಲಾನುಭವಿಗಳಿಗೆ 13.89 ಕೋಟಿ ರೂ ಪಾವತಿಸಲಾಗಿದೆ. ಇಂತಹ ಸಾಧನೆಗಳ ಬಗ್ಗೆ ಜನತೆಗೆ ತಿಳಿಸಬೇಕು. ಅರ್ಹ ಎಲ್ಲ ಫಲಾನುಭವಿಗಳು ಯೋಜನೆಯ ವ್ಯಾಪ್ತಿಯೊಳಗಡೆ ಬರಲು ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಕೊಪ್ಪಳ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ ಅವರು ಮಾತನಾಡಿ ಸಭೆಗೆ ಅನೇಕ ಸಲಹೆ ಸೂಚನೆಗಳನ್ನು ನೀಡಿದರು. ಜೂನ್ 9 ರಂದು ಶಕ್ತಿ ಯೋಜನೆ ಆರಂಭವಾಗಿ ಮೂರು ವರ್ಷ ಆಗತ್ತಿದ್ದು ಅಂದು ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಸಾಧನಾ ಕಾರ್ಯಕ್ರಮ ಮಾಡಬೇಕು. ಅಂಗನವಾಡಿ ಕಾರ್ಯಕರ್ತರು ಮತ್ತು ವಿದ್ಯುತ್ ಮೀಟರ್ ರೀಡರ್ ಅವರ ಸಹಕಾರದೊಂದಿಗೆ ಗೃಹಲಕ್ಷ್ಮೀ ಫಲಾನುಭವಿಗಳ ನಿಖರ ಮಾಹಿತಿ ಸಂಗ್ರಹಣೆ ಕೆಲಸ ಮಾಡಬೇಕು. ಅನ್ನಭಾಗ್ಯ ಯೋಜನೆಗೆ ಇನ್ನಷ್ಟು ಸುಧಾರಿತ ವ್ಯವಸ್ಥೆ ಜಾರಿ ಮಾಡಬೇಕು. ಗ್ಯಾರಂಟಿ ಯೋಜನೆಗಳ ಮೂಲಕ ಸಾಕಷ್ಟು ಜನರ ಜೀವನೋಪಾಯ ಸುಗಮ ಮಾಡುವ ಜೊತೆಗೆ ಜನರ ತಲಾ ಆದಾಯ ಹೆಚ್ಚಳ ಮಾಡಿದ ಶ್ರೇಯಸ್ಸು ರಾಜ್ಯ ಸರ್ಕಾರಕ್ಕೆ ಸಲ್ಲುತ್ತಿದ್ದು, ಈ ಬಗ್ಗೆ ಜನರಿಗೆ ತಿಳಿಸುವ ಕಾರ್ಯವನ್ನು ಎಲ್ಲಾ ಸಂಬಂಧಿಸಿದ ಇಲಾಖೆಗಳು ಮಾಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ.ಖಾದ್ರಿ, ಅಮರೇಶಪ್ಪ, ನಾಗರಾಜ ಅರಳಿ, ಸದಸ್ಯರಾದ ಶಾರದಾ ಕಟ್ಟಿಮನಿ, ಹಜರತ್ ಹುಸೇನ್, ಆನಂದ ಹಾಸಲಕರ, ದೇವಪ್ಪ ಭಾವಿಕಟ್ಟಿ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರು ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ವಾಂಗೀಣ ಅಭಿವೃದ್ಧಿ ಹೋರಾಟ ಸಮಿತಿಯಿಂದ ಇನ್ಸ್ಪೆಕ್ಟರ್ ಪ್ರಕಾಶ ಯಾತನೂರ್‌ಗೆ ಸನ್ಮಾನ



**ಬೆಳಗಾವಿ ವಾರ್ತೆ ಗಂಗಾವತಿ :** ನೂತನವಾಗಿ ನಗರ ಠಾಣೆಗೆ ವರ್ಗಾವಣೆಯಾಗಿ ಬಂದ ಪೊಲೀಸ್ ಇನ್ಸ್ಪೆಕ್ಟರ್ ಪ್ರಕಾಶ ಯಾತನೂರ್ ಇವರಿಗೆ ಸರ್ವಾಂಗೀಣ ಅಭಿವೃದ್ಧಿ ಹೋ ರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಬಸವರಾಜ ಮ್ಯಾಗಳಮನಿ ತಾಲೂಕು ಅಧ್ಯಕ್ಷ ಜಡಿಯಪ್ಪ ಹಂಚಿನಾಳ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮ್ಯಾಗಳಮನಿ ಮಾತನಾಡಿ ತಾವುಗಳು ವರ್ಗಾವಣೆಯಾಗಿ ಗಂಗಾವತಿ ನಗರಕ್ಕೆ ಆಗಮಿಸಿದ್ದಕೆ ನಮ್ಮ ಸಂಘವು ತಮಗೆ ಹೃದಯ ಪೂರಕ ಸ್ವಾಗತವನ್ನು ಬಯಸುತ್ತೇವೆ.

ಗಂಗಾವತಿ ನಗರದಲ್ಲಿ ಸೌಹಾರ್ದ ತೆಯ ಜನತೆ ಇದ್ದು ಶಾಂತಿ ಗಾಗಿ ಎಲ್ಲ ಮುಖಂಡರು, ಸಂಘ ಸಂಸ್ಥೆಗಳು, ಪಕ್ಷಗಳು ಸಹಕಾರ ನೀಡುತ್ತಾ ಬಂದಿವೆ. ಎಲ್ಲೋ ಒಬ್ಬರಿಂದ ಅಶಾಂತಿ ಉಂಟಾ ದರೆ ಅಂತಹವರ ಮೇಲೆ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಬೇಕು.

ನಗರದಲ್ಲಿ ಗಾಂಜಾ ಮಾರಾಟ ಹಾಗೂ ಸೇವನೆ ಅತೀ ಹೆಚ್ಚು ನಡೆಯುತ್ತಿದೆ. ಸುಮಾರು 16 ವರ್ಷದಿಂದ ಇಪ್ಪತ್ತೈದು ವರ್ಷದವರು ಈ ದುಶ್ಚಟಕ್ಕೆ ದಾಸರಾಗಿ ತಮ್ಮ ಜೀವನವನ್ನು ಬಲಿಕೊಡುತ್ತಿದ್ದಾರೆ. ನಿರ್ಜನ ಪ್ರದೇಶಗಳು, ಸರಕಾರಿ ಶಾಲೆಗಳ ಆವರಣ ಇತ್ಯಾದಿ ಸ್ಥಳಗಳು ಅವರ ತಾಣಗಳಾಗಿವೆ, ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಕೆಲವು ವಾರ್ಡ್ ಗಳಲ್ಲಿ ಪೊಲೀಸ್ ಸಿಬ್ಬಂದಿಗಳು ಸಂಚರಿಸಿ ಎಚ್ಚರಿಕೆಯ ಸಂದೇಶ ರವಾನಿಸಿ ಗಾಂಜಾ ಮುಕ್ತನಗರ ಮಾಡಬೇಕು.ನಗರಸಭೆ ಅಧಿಕಾರಿಗಳು ಇದೀಗ ಫುಟ್ ಬಾತ್ ಮೇಲಿರುವ ಅಂಗಡಿಗಳನ್ನು ತೆರವುಗೊಳಿಸಿದ್ದಾರೆ. ನಗರದಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಮಾಡಿ ಜನರಿಗೆ ಮತ್ತು ವಾಹನ ಸಂಚಾರ ಸುಗಮಗೊಳಿಸಲು ಕ್ರಮಕೈಗೊಳ್ಳಬೇಕು ಎಂದರು.

ಶಾಲಾ,ಕಾಲೇಜ್ ಕಚೇರಿಗಳು ಪ್ರಾರಂಭವಾಗುವ ಸಮಯ ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ಹಾಗೂ ಮುಕ್ತಾಯ ಸಮಯ ಸಂಜೆ 4.30ರಿಂದ5.30 ರವರೆಗೆ ಪ್ರಮುಖ ವೃತ್ತಗಳಾದ ನೀಲಕಂಠಶ್ವರ ಸರ್ಕಲ್, ಕನಕದಾಸ ಸರ್ಕಲ್, ಅಂಬೇಡ್ಕರ್ ಸರ್ಕ ಲ್, ಅಂಬೇಡ್ಕರ್ ನಗರ, ಬೇತಲ್ ಶಾಲೆ ಯ ಸರ್ಕಲ್, ಪಂಪಾನಗರ ಸರ್ಕಲ್, ಸಿ ಬಿ ಎಸ್ ಸರ್ಕಲ್, ಇತ್ಯಾದಿ ಸರ್ಕಲ್ ಗಳಲ್ಲಿ ಸಂಚಾರಿ ಪೊಲೀಸ್ ರನ್ನು ನಿಯೋಜನೆ ಮಾಡಿ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿಕೊಡ ಬೇಕು ಎಂದು ಮನವಿ ಮಾಡಿದರು.

ನಗರದ ಕೆಲವು ಲಾಡ್ಜ್ ಗಳಲ್ಲಿ ಇಸ್ಪೀಟ್ ಜೂಜಾಟ್ ನಡೆಯುತ್ತಿದೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿರುತ್ತದೆ ಇವುಗಳನ್ನು ತಡೆಗಟ್ಟಬೇಕು. ಎಲ್ಲಾ ವಿಷಯಗಳನ್ನು ಅನುಷ್ಠಾನಗೊಳಿಸ ಬೇಕೆಂದು ಮನವಿ ಮಾಡಿದರು.

ಕಾನೂ ನು ಪಾಲನೆಗೆ ನಮ್ಮ ಸಂಘವು ಸಂಪೂ ರ್ಣ ಸಹಕಾರ ನೀಡುತ್ತದೆಂದು ತಿಳಿಸಿದ ರು. ಇದಕ್ಕೆ ಸ್ಪಂದಿಸಿ ದ ಇನ್ಸ್ಪೆಕ್ಟರ್ ರವರು ನಿವು ಹೇಳಿದ ವಿಷಗಳು ಉತ್ತಮವಾಗಿವೆ ಇವುಗಳ ಕುರಿತು ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಾಗುವದೆಂದು ಭರವಸೆ ನೀಡಿದರು.

# ದಳವಾಯಿ ವಸ್ತಿ ಶಾಲೆ ಮುಚ್ಚದಿರಲು ಆಗ್ರಹಿಸಿ,ಶಾಲೆ ಮುಂದೆ ಬ್ಯಾನರ್ ಕಟ್ಟಿ ಪಾಲಕರ ಹಾಗೂ ವಿದ್ಯಾರ್ಥಿಗಳ ಪ್ರತಿಭಟನೆ



**ಬೆಳಗಾವಿ ವಾರ್ತೆ ವಿಜಯಪುರ:** ಕೆಪಿಎಸ್ ವ್ಯಾಗ್ನೆಟ್ ಕಾಖಂಡಕಿ ಗ್ರಾಮದ. ದಳವಾಯಿ ವಸ್ತಿ ಶಾಲೆ ಮುಚ್ಚದಿರಲು ಆಗ್ರಹಿಸಿ ಪಾಲಕರು ಹಾಗೂ ವಿದ್ಯಾರ್ಥಿಗಳು ಸೇರಿ, ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ನೇತೃತ್ವದಲ್ಲಿ ಶಾಲೆಯ ಮುಂದೆ 'ನಮ್ಮೂರ ಶಾಲೆ ನಮ್ಮದು, ನಮ್ಮೂರಲ್ಲೆ ಉಳಿಯಲಿ' ಎಂಬ ಬ್ಯಾನರ್ ಕಟ್ಟಿ ಪ್ರತಿಭಟನೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿ ಎಐಡಿಎಸ್‌ಓ ಸಂಘಟನೆಯ ರಾಜ್ಯ ಮುಖಂಡರಾದ ಗೋವಿಂದ "ಏಷಿಯನ್ ಡೆವಲಪ್ಮೆಂಟ್ ಬ್ಯಾಂಕ್ ಇಂದ ಬರುತ್ತಿರುವ ದುಡ್ಡಿಗೋಸ್ಕರ ಕೆಪಿಎಸ್ ಮ್ಯಾಗ್ನೆಟ್ ಹೆಸರಲ್ಲಿ ಸರ್ಕಾರ ಶಾಲೆ ಮುಚ್ಚಲು ಹೊರಟಿರುವುದು ಖಂಡನೀಯ. ಒಂದು ನಾಗರಿಕ ಸಮಾಜ ಸೃಷ್ಟಿಸಲು ಕಾರಣವಾಗುವ ಶಿಕ್ಷಣ ನೀಡಲು ಶಾಲೆಗಳು ಅವಶ್ಯಕ. ವಸ್ತಿ ಶಾಲೆಗಳು ಬಂದಾದರೆ ಶಿಕ್ಷಣಕ್ಕಾಗಿ ಮಕ್ಕಳು ಅದರಲ್ಲೂ ಹೆಣ್ಣು ಮಕ್ಕಳು ದೂರದ ಶಾಲೆಗೆ ಹೋಗುವುದು ಎಷ್ಟು ದುಷ್ಕರ ಎಂಬುದು ಪ್ರತಿಯೊಬ್ಬ ಪಾಲಕರಿಗೂ ಗೊತ್ತು. ಶಿಕ್ಷಣ ಎಂಬುದು ಲಾಭ ನಷ್ಟವನ್ನು ನೋಡುವ ಕ್ಷೇತ್ರವಲ್ಲ. ಪ್ರತಿಯೊಬ್ಬ ನಾಗರಿಕನಿಗೂ ಶಿಕ್ಷಣ ಅವಶ್ಯಕ ಎಂಬುದನ್ನು ಮನಗಂಡು ಸರ್ಕಾರ ಆ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಬೇಕು. ಎಂದರು.

" ನಾವು ಕಟ್ಟುವ ಪ್ರತಿಯೊಂದು ತೆರಿಗೆಯ ಹಣವು ಜನಪರ ಕೆಲಸಕ್ಕೆ ಖರ್ಚಾಗಬೇಕು. ಪ್ರತಿಯೊಬ್ಬ ಬಡವರ ಮಕ್ಕಳಿಗೂ ಶಿಕ್ಷಣ ಸಿಗುವಂತೆ ಆಗಬೇಕು. ಖಾಲಿ ಇರುವ 60 ಸಾವಿರ ಶಿಕ್ಷಕರ ಹುದ್ದೇಗಳನ್ನು ಕೂಡಲೇ ಭರ್ತಿ ಮಾಡಿಕೊಳ್ಳಬೇಕು." ಎಂದು ಆಗ್ರಹಿಸಿದರು.

ಪ್ರತಿಭಟನಾ ಸಭೆಯಲ್ಲಿ ದಳವಾಯಿ ವಸ್ತಿಯ ಶಾಲೆಯ ಉಳಿಸಿ ಅಧ್ಯಕ್ಷರಾದ ಸೋಮು ಅಡವಿ,ನಾರಾಯಣಪ್ಪ ಶ್ಯಾವಕ್ಕ, ಸುರೇಖಾ ತಾಂಬೆ, ಲಕ್ಷ್ಮೀ ಸೋನುಬಾಯಿ, ಚಗುನ ರಮೇಶ ಇನ್ನಿತರರು ರೈತ ಮುಖಂಡರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಮಹಾರಾಣಾ ಪ್ರತಾಪ್ ಸಿಂಹ ಮೂರ್ತಿ ಅನಾವರಣ

**ಬೆಳಗಾವಿ ವಾರ್ತೆ ವಿಜಯಪುರ:** ನಗರದ ವಾರ್ಡ್ ನಂ.11 ರಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ಹಾಗೂ ಉದ್ಘಾಟನೆಯನ್ನು ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳರು ಬುಧವಾರ ನೆರವೇರಿಸಿದರು.

ವಿಜಯಪುರ ನಗರದ ವಾರ್ಡ್ ನಂ.11 ರಲ್ಲಿ ಬರುವ ಅಟಲ್ ಬಿಹಾರಿ ವಾಜಪೇಯಿ ಮಾರ್ಗದಲ್ಲಿ ಕೆ.ಬಿ.ಜೆ.ಎನ್.ಎಲ್ ವತಿಯಿಂದ ಎಸ್.ಸಿ.ಪಿ/ ಟಿ.ಎಸ್.ಪಿ ವಿಶೇಷ ಘಟಕ ಯೋಜನೆಯಡಿ/ಗಿರಿಜನ ಉಪ ಯೋಜನೆಯಡಿ ಮಂಜೂರಿಸಲಾದ ರೂ.9 ಲಕ್ಷ ಅನುದಾನದಲ್ಲಿ ನಿರ್ಮಾಣ ಮಾಡಲಾದ ಶುದ್ಧ ಕುಡಿಯುವ ನೀರಿನ ಘಟಕ, ರಾಷ್ಟ್ರ ವೀರ ಶ್ರೀ ಮಹಾರಾಣಾ ಪ್ರತಾಪ್ ಸಿಂಹ ವೃತ್ತದಲ್ಲಿ ನೂತನವಾಗಿ ಪ್ರತಿಷ್ಠಾಪಿಸಲಾದ ಮಹಾರಾಣಾ ಪ್ರತಾಪ್ ಸಿಂಹ ಮೂರ್ತಿಯನ್ನು ಉದ್ಘಾಟಿಸಿದರು. ನಂತರ ಮಿನಿ ಮಾದರ ಓಣಿಯ ಶ್ರೀ ವಿಠೋಬಾ ಮಂದಿರ ಹತ್ತಿರ ಸನ್ 2025–26ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಿಸಲಾದ ರೂ.10 ಲಕ್ಷ ಅನುದಾನ ದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ, ಸಾರ್ವಜನಿಕರ ಅಹವಾಲು ಆಲಿಸಿದರು.

ಮಹಾನಗರ ಪಾಲಿಕೆ ಮೇಯರ್ ಎಂ.ಎಸ್.ಕರಡಿ, ಸದಸ್ಯರಾದ ವಿಠ್ಠಲ ಹೊಸಪೇಟೆ, ರಾಜಶೇಖರ ಕುರಿಯುವರ, ಮುಖಂಡರಾದ ಸಿದ್ದರಾಮಪ್ಪ ಉಪ್ಪಿನ, ಅಶೋಕ ಬೆಲ್ಲದ, ಬಾಬು ಶಿರಶ್ಯಾಡ, ಉಮೇಶ ವೀರಕರ, ಮಧು ಕಲಾದಗಿ,



ವಿಜಯ ರಜಪೂತ, ಶಿವಲಿ ಸಾಳುಂಕೆ, ಬಲಭೀಮ ಸಾಳುಂಕೆ, ತಾನಾಜಿ ಸಾಳುಂಕೆ, ಸೋಮು ರಣದೇವಿ, ಗಣೇಶ ರಣದೇವಿ, ಪಾಂಡುರಂಗ, ಶಂಕರ ಚಲವಾದಿ, ಶ್ರೀಶೈಲ ದೇವರ ಮತ್ತಿತರರು ಇದ್ದರು.

# ಜಮೀನು ಆಸ್ತಿ ವಿವಾದ: ಮಾರಕಾಸ್ತ್ರಗಳಿಂದ ಆರು ಜನರ ಭೀಕರ ಹತ್ಯೆ



**ಬೆಳಗಾವಿ ವಾರ್ತೆ ವಿಜಯಪುರ/ಚಡಚಣ:** ಜಮೀನು ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಆರು ಜನರನ್ನು ಶುಕ್ರವಾರ ಸಂಜೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಜಿಲ್ಲೆಯ ಚಡಚಣ ತಾಲ್ಲೂಕಿನ ಗೋವಿಂದಪುರ ಗ್ರಾಮದಲ್ಲಿ ಶುಕ್ರವಾರ ಸಂಜೆ ನಡೆದಿದೆ.

ಚಂದು ನಿರಾಳೆ(56), ದುಂಡಪ್ಪ ನಿರಾಳೆ(65), ಶಿವಪುತ್ರ ನಿರಾಳೆ(60), ರಾಹುಲ್ ನಿರಾಳೆ(35), ಸಮರ್ಥ ನಿರಾಳೆ(24), ಶಬ್ಬೀರ್ ನದಾಫ್(50) ಕೊಲೆಯಾದವರು.

ಜಿಲ್ಲಾ ಪೊಲೀಸ್ ವರಿಷ್ಠಧಿಕಾರಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಇತರ ಪೊಲೀಸ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಕೊಲೆಯಾದವರ ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿದೆ. ಸ್ಥಳಕ್ಕೆ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿದೆ.

ಘಟನೆ ವಿವರ:

15–20 ಜನರನ್ನು ಒಳಗೊಂಡ ದುಷ್ಕರ್ಮಿಗಳ ಗುಂಪೊಂದು ಹೊಲದಲ್ಲಿ ಕೆಲಸ ಮಾಡುತ್ತಿದ್ದ ನಿರಾಳೆ ಕುಟುಂಬದವರ ಮೇಲೆ ಏಕಾಏಕಿ ದಾಳಿ ನಡೆಸಿ, ಕಣ್ಣಿಗೆ ಖಾರದ ಪುಡಿ ಎರಚಿ, ಮಾರಕಾಸ್ತ್ರಗಳಿಂದ ದಾಳಿ ನಡೆಸಿ, ಬರ್ಬರವಾಗಿ ಕೊಲೆ ಮಾಡಿದ್ದಾರೆ.

ಚಡಚಣ ಪಟ್ಟಣದ ನಿರಾಳೆ ಕುಟುಂಬದವರು ಗೋವಿಂದಪುರ ಗ್ರಾಮದ ವ್ಯಕ್ತಿಯೊಬ್ಬರಿಗೆ ಸೇರಿದ 24 ಎಕರೆ ವಿವಾದಿತ ಜಮೀನನ್ನು ಆರು ತಿಂಗಳ ಹಿಂದೆ ಖರೀದಿ ಮಾಡಲು ಮುಂದಾಗಿತ್ತು. ಈ ವೇಳೆ ಗ್ರಾಮಸ್ಥರು ವಿವಾದಿತ ಜಮೀನು ಖರೀದಿಸದಂತೆ ಎಚ್ಚರಿಕೆ ನೀಡಿದ್ದರು ಎಂದು ತಿಳಿದು ಬಂದಿದೆ. ವಿರೋಧದ ನಡುವೆಯೂ ನಿರಾಳೆ ಕುಟುಂಬದವರು ಜಮೀನು ಖರೀದಿ ಮಾಡಿದ್ದರು. ಅಲ್ಲದೇ, ಇದೀಗ ಟ್ರ್ಯಾಕ್ಟರ್, ಜೆಸಿಬಿ ಮೂಲಕ ಹೊಲವನ್ನು ಸ್ವಚ್ಛಗೊಳಿಸಿ, ಕೃಷಿಗೆ ಸಜ್ಜುಗೊಳಿಸುತ್ತಿದ್ದ ವೇಳೆ ದುಷ್ಕರ್ಮಿಗಳು ಮೊದಲು ಗುಂಡು ಹಾರಿಸಿದ್ದು, ಗುಂಡು ಯಾರಿಗೂ ತಗಲಿಲ್ಲ. ಮಾರಕಾಸ್ತ್ರಗಳಿಂದ ದಾಳಿ ನಡೆಸಿ, ಮಾರಣಹೋಮ ನಡೆಸಿರುವುದಾಗಿ ಪ್ರಾಥಮಿಕ ಮಾಹಿತಿ ಲಭಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಶವಗಳನ್ನು ಚಡಚಣ ತಾಲ್ಲೂಕು ಸರ್ಕಾರಿ ಆಸ್ಪತ್ರೆಗೆ ತರಲಾಗಿದೆ. ವಿಜಯಪುರ ಬಿ.ಎಲ್. ಡಿ. ಇ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

ಕೊಲೆಗಾರರು ಯಾರು ಎಂಬ ಮಾಹಿತಿ ಇನ್ನೂ ಖಚಿತವಾಗಿಲ್ಲ. ಈ ಬಗ್ಗೆ ತನಿಖೆ ನಡೆದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ತನಿಖೆ ಮುಂದುವರೆದಿದ್ದು ಕೊಲೆಗೆ ಯಾರು ಕಾರಣರಾಗಿದ್ದಾರೆ ಎಂಬುವುದು ನಿಖರವಾಗಿ ಬೆಳಕಿಗೆ ಬರಬೇಕಿದೆ.

ಕೊಲೆಯಾದ ಆರು ಜನರ ಮೃತ ದೇಹಗಳ ಮರಣೋತ್ತರ ಪರೀಕ್ಷೆ ವಿಜಯಪುರದ ಬಿ ಎಲ್ ಡಿ ಇ ಆಸ್ಪತ್ರೆಯಲ್ಲಿ ಮಾಡಿದ್ದು, ಮರಣೋತ್ತರ ಪರೀಕ್ಷೆ ಬಳಿಕ ಚಡಚಣ ಪಟ್ಟಣಕ್ಕೆ ಶವಗಳ ಕುಟುಂಬಸ್ಥರು ತರಲಿದ್ದಾರೆ. ಮಧ್ಯಾಹ್ನದ ವೇಳೆಗೆ ಅಂತ್ಯಕ್ರಿಯೆ ಆಗುವ ಸಾಧ್ಯತೆ ಇದೆ.

ಚಡಚಣ ಪಟ್ಟಣದಲ್ಲಿ ಭಾರೀ ಪೊಲೀಸ್ ಭದ್ರತೆ ಮಾಡಿದ್ದು, ಹತ್ಯೆಯಾದವರು ಚಡಚಣ ಭಾಗದಲ್ಲಿ ಪ್ರಭಾವಿ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಚಡಚಣ ಪಟ್ಟಣದಲ್ಲಿ ಭದ್ರತೆ ನೀಡಲಾಗಿದೆ.

ಘಟನಾ ಸ್ಥಳಕ್ಕೆ ಐಜಿಪಿ ಸಂದೀಪ್ ಪಾಟೀಲ್, ಎಸ್ ಪಿ ಲಕ್ಷ್ಮಣ ನಿಂಬರಗಿ ತಡರಾತ್ರಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಬೆಳಗಾವಿ: ಡಾಕ್ಟರ್ ಮನೆಯಲ್ಲಿ 1.2 ಕೋಟಿ ರೂ. ಮೊತ್ತದ ಚಿನ್ನ ಕಳವು: ಇಬ್ಬರ ಬಂಧನ!




**ಬೆಳಗಾವಿ ವಾರ್ತೆ ಬೆಳಗಾವಿ:** ನಗರದ ವೃದ್ಧ ವೈದ್ಯ ದಂಪತಿಯ ಮನೆಯಿಂದ 1.2 ಕೋಟಿ ರೂ. ಮೌಲ್ಯದ ಚಿನ್ನಾಭರಣಗಳನ್ನು ಕಳವು ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿದೆ. ಆರೋಪಿಗಳನ್ನು ರಾಹುಲ್ ಸತೀಶ್ ಕಾಂಬ್ಳೆ ಮತ್ತು ಬಾಬಾಸಾಬ್ ಈರಪ್ಪ ಕಟಗೇರಿ ಎಂದು ಗುರುತಿಸಲಾಗಿದೆ.

ಪೊಲೀಸರು 52.5 ಲಕ್ಷ ರೂ. ಮೌಲ್ಯದ 350 ಗ್ರಾಂ ಚಿನ್ನಾಭರಣಗಳು ಮತ್ತು ಬ್ಯಾಂಕ್ ಖಾತೆಯಲ್ಲಿ ಠೇವಣಿ ಇಟ್ಟಿದ್ದ 22.8 ಲಕ್ಷ ರೂ. ನಗದು ವಶಪಡಿಸಿಕೊಂಡಿದ್ದು, ಒಟ್ಟು 75.3 ಲಕ್ಷ ರೂ. ವಸೂಲಿ ಮಾಡಲಾಗಿದೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ.

ಮನೆಯಲ್ಲಿದ್ದ 930 ಗ್ರಾಂ ಚಿನ್ನದ ಆಭರಣಗಳು ಕಾಣೆಯಾದ ನಂತರ ಮೇ 11 ರಂದು ಬೆಳಗಾವಿಯ ಕ್ಲಬ್ ರಸ್ತೆಯ ನಿವಾಸಿ ಡಾ. ಅನ್ನಪೂರ್ಣ ವಿಶ್ವನಾಥ್ ಧಾದೇದ್ ದೂರು ದಾಖಲಿಸಿದ್ದರು. ಬಲವಂತದ ಪ್ರವೇಶ ಅಥವಾ ಲಾಕರ್‌ಗೆ ಹಾನಿಯಾದ ಯಾವುದೇ ಲಕ್ಷಣಗಳು ಇಲ್ಲದ ಕಾರಣ, ಆರಂಭದಲ್ಲಿ ಮನೆಯೊಳಗೆ ಕೆಲಸ ಮಾಡುವ ವ್ಯಕ್ತಿಗಳ ಮೇಲೆ ಅನುಮಾನ ಉಂಟಾಗಿತ್ತು ಎಂದು ಪೊಲೀಸರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೊಲೀಸ್ ಆಯುಕ್ತ ಬೊರಸೆ ಭೂಷಣ್ ಗುಲಾಬ್ರಾವ್, ಪ್ರಮುಖ ಆರೋಪಿ ರಾಹುಲ್ ಕಾಂಬ್ಳೆ, ಅನಾರೋಗ್ಯದಿಂದ ಹಾಸಿಗೆ ಹಿಡಿದಿದ್ದ ಡಾ. ವಿಶ್ವನಾಥ್ ಧಾದೇದ್ ಅವರನ್ನು ನೋಡಿಕೊಳ್ಳಲು ಡಿಸೆಂಬರ್‌ನಲ್ಲಿ ಕೇರ್‌ಟೇಕರ್ ಆಗಿ ಸೇರಿಕೊಂಡಿದ್ದ. ದಂಪತಿಯ ಮಗ, ವೈದ್ಯನೂ ಆಗಿದ್ದಾನೆ, ಬೇರೆಡೆ ವಾಸಿಸುತ್ತಿದ್ದಾನೆ. ಇದರಿಂದಾಗಿ ಕುಟುಂಬವು ಕೇರ್‌ಟೇಕರ್ ಅನ್ನು ನೇಮಿಸಬೇಕಾಯಿತು. ಕಾಂಬ್ಳೆ ಸುಮಾರು ಮೂರು ತಿಂಗಳ ಅವಧಿಯಲ್ಲಿ ಆಗಾಗ್ಗೆ ಆಭರಣಗಳನ್ನು ಕಳ್ಳತನ ಮಾಡಿದ್ದು, ನಂತರ ಪರಾರಿಯಾಗಿದ್ದ ಎಂದು ತಿಳಿಸಿದರು.

ತನಿಖೆ ವೇಳೆ ಮನೆಯಲ್ಲಿರುವ ಹಳೆಯ ಲಾಕರ್ ಮುಚ್ಚಿದಾಗ ಲಾಕ್ ಆಗಿರುವಂತೆ ಕಂಡುಬಂದಿತ್ತು. ಆದರೆ ಸ್ವಲ್ಪ ಬಲ ಪ್ರಯೋಗದ ಮೂಲಕ ಅದನ್ನು ತೆಗೆಯಬಹುದಿತ್ತು. ಆರೋಪಿಗಳು ಈ ನ್ಯೂನತೆಯನ್ನು ಬಳಸಿಕೊಂಡು ಕಳ್ಳತನ ಮಾಡಿದ್ದಾರೆ ಎಂದು ವರದಿಯಾಗಿದೆ ಎಂದು ಆಯುಕ್ತರು ಹೇಳಿದರು.

ಕಾಂಬ್ಳೆ ಸಹ–ಆರೋಪಿ ಬಾಬಾಸಾಬ್ ಕಟಗೇರಿ ಸಹಾಯದಿಂದ ಕದ್ದ ಆಭರಣಗಳನ್ನು ಮಾರಾಟ ಮಾಡಲು ಪ್ರಯತ್ನಿಸಿದ್ದ. ಈ ಸಂಬಂಧ ವಿಶೇಷ ತನಿಖಾ ತಂಡವನ್ನು ರಚಿಸಿ, ಇಬ್ಬರೂ ಆರೋಪಿಗಳನ್ನು ಪತ್ತೆಹಚ್ಚಿ ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಉಳಿದ ಕದ್ದ ಆಭರಣಗಳನ್ನು ಮರುಪಡೆಯಲು ಪ್ರಯತ್ನಗಳು ನಡೆಯುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಬೆಲೆಬಾಳುವ ಆಭರಣಗಳನ್ನು ಬ್ಯಾಂಕ್ ಲಾಕರ್‌ಗಳಲ್ಲಿ ಸಂಗ್ರಹಿಸಬೇಕು, ಮನೆ ಲಾಕರ್‌ಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂದು ಖಚಿತಪಡಿಸಿಕೊಳ್ಳಬೇಕು ಮತ್ತು ಭದ್ರತೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು ಎಂದು ಆಯುಕ್ತರು ತಿಳಿಸಿದ್ದಾರೆ.

# "SIR ಹೆಸರಿನಲ್ಲಿ ಮತದಾನದ ಹಕ್ಕು ಕಸಿಯುವ ಸಂಚು ಬೇಡ"

## ಜಿಲ್ಲಾಧಿಕಾರಿ ಮುಖಾಂತರ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಬೃಹತ್ ಪ್ರತಿಭಟನೆ ನಡೆಸಿದ SIR ವಿರೋಧಿ ಪಕ್ಷಗಳು ಹಾಗೂ ಜನಪರ ಸಂಘಟನೆಗಳ ಒಕ್ಕೂಟ




**ಬೆಳಗಾವಿ ವಾರ್ತೆ ವಿಜಯಪುರ:** ರಾಜ್ಯದಲ್ಲಿ ಜಾರಿಗೆ ತರಲು ಮುಂದಾಗಿರುವ SIR (Special Intensive Revision) ಕ್ರಮವನ್ನು ತಕ್ಷಣ ಹಿಂಪಡೆಯಬೇಕೆಂದು ಆಗ್ರಹಿಸಿ ಖಖಖ ವಿರೋಧಿ ಜಾತ್ಯತೀತ ಸಂಘಗಳು ಹಾಗೂ ಜನಪರ ಸಂಘಟನೆಗಳ ಒಕ್ಕೂಟ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಹಾಗೂ ಕರ್ನಾಟಕ ಸರ್ಕಾರಕ್ಕೆ ಮನವಿ ಸಲ್ಲಿಸಿತು.

ವಿಜಯಪುರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಜನಪರ, ಪ್ರಗತಿಪರ ಹಾಗೂ ರಾಜಕೀಯ ಸಂಘಟನೆಗಳ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿ, SIR ಕ್ರಮದಿಂದ ಬಡವರು, ಅಲ್ಪಸಂಖ್ಯಾತರು, ರೈತರು, ಕಾರ್ಮಿಕರು ಹಾಗೂ ಹಿಂದುಳಿದ ವರ್ಗಗಳ ಮತದಾನದ ಹಕ್ಕಿಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ ಎಂದು ತೀವ್ರ ಆತಂಕ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡ ಶ್ರೀನಾಥ ಪೂಜಾರಿ, "ಚುನಾವಣಾ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ನ್ಯಾಯಸಮ್ಮತವಾಗಿ ನಡೆಸುವ ಹೆಸರಿನಲ್ಲಿ ಜಾರಿಗೊಳಿಸಲಾಗುತ್ತಿರುವ SIR ಕ್ರಮವು ಸಾಮಾನ್ಯ ಜನರ ಮತದಾನದ ಹಕ್ಕಿನ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ರಾಜ್ಯ ಸರ್ಕಾರವು ತಕ್ಷಣ ಕೇಂದ್ರ ಚುನಾವಣಾ ಆಯೋಗದ ಮೇಲೆ ಒತ್ತಡ ಹೇರಿ ಈ ಅವೈಜ್ಞಾನಿಕ ಹಾಗೂ ಜನವಿರೋಧಿ ಕ್ರಮವನ್ನು ಹಿಂಪಡೆಯುವಂತೆ ಆಗ್ರಹಿಸಬೇಕು" ಎಂದು ಹೇಳಿದರು.

ಅಹಿಂದ ಮುಖಂಡ ಎಸ್.ಎಂ. ಪಾಟೀಲ ಗಣೀಹಾರ ಮಾತನಾಡಿ, "ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳಲು ಅನಗತ್ಯ ದಾಖಲೆಗಳನ್ನು ಕಡ್ಡಾಯಗೊಳಿಸಿರುವುದು ಬಡಜನರಿಗೆ ಸಂಕಷ್ಟ ಉಂಟುಮಾಡಲಿದೆ. ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಜನನ ಪ್ರಮಾಣಪತ್ರ, ಭೂ ದಾಖಲೆ, ಶಿಕ್ಷಣ ದಾಖಲೆಗಳನ್ನು ಒದಗಿಸುವುದು ಕಷ್ಟಕರವಾಗಿದೆ. ಇದರಿಂದ ಸಾವಿರಾರು ಜನರು ಮತದಾನದ ಹಕ್ಕಿನಿಂದ ವಂಚಿತರಾಗುವ ಭೀತಿ ಎದುರಾಗಿದೆ" ಎಂದು ಆತಂಕ ವ್ಯಕ್ತಪಡಿಸಿದರು.

**ಒಕ್ಕೂಟದ ಪ್ರಮುಖ ಆಕ್ಷೇಪಣೆಗಳು:**

– ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳಲು ಅತಿಯಾದ ದಾಖಲೆಗಳನ್ನು ಕಡ್ಡಾಯಗೊಳಿಸಲಾಗಿದೆ.

– ಹಲವಾರು ಕುಟುಂಬಗಳ ಬಳಿ ಅಗತ್ಯ ದಾಖಲೆಗಳಿಲ್ಲದ ಕಾರಣ ಜನರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ.

– ಗ್ರಾಮೀಣ ಹಾಗೂ ಬಡಜನರಿಗೆ ಸರ್ಕಾರಿ ಕಚೇರಿಗಳಿಗೆ ಅಲೆದಾಟ ಹೆಚ್ಚಾಗಲಿದೆ.

– ಅಲ್ಪಸಂಖ್ಯಾತರು, ದಲಿತರು, ಆದಿವಾಸಿಗಳು ಹಾಗೂ ಕಾರ್ಮಿಕ ವರ್ಗದ ಜನರು ಹೆಚ್ಚಾಗಿ ತೊಂದರೆಗೆ ಒಳಗಾಗಬಹುದು.

– ಮತದಾನದ ಹಕ್ಕು ಕಳೆದುಕೊಳ್ಳುವ ಭೀತಿಯಿಂದ ಸಾಮಾಜಿಕ ಅಶಾಂತಿ ಉಂಟಾಗುವ ಸಾಧ್ಯತೆ ಇದೆ.

ಮನವಿಯಲ್ಲಿ ಚುನಾವಣಾ ಆಯೋಗದ ಕ್ರಮಗಳನ್ನು ಪ್ರಶ್ನಿಸಿರುವ ಸಂಘಟನೆಗಳು, "ಬಡಜನರ ಬಳಿ ದಾಖಲೆಗಳಿಲ್ಲವೆಂಬ ಕಾರಣಕ್ಕೆ ಅವರ ಮತದಾನದ ಹಕ್ಕನ್ನು ಕಸಿದುಕೊಳ್ಳುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ" ಎಂದು ಆರೋಪಿಸಿವೆ.

**ಹೋರಾಟದ ಎಚ್ಚರಿಕೆ**

SIR ಕ್ರಮವನ್ನು ಸರ್ಕಾರ ತಕ್ಷಣ ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಹೋರಾಟ, ಪ್ರತಿಭಟನೆ ಹಾಗೂ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ಒಕ್ಕೂಟ ಎಚ್ಚರಿಸಿದೆ. ಜನರ ಸಂವಿಧಾನಬದ್ಧ ಹಕ್ಕುಗಳ ರಕ್ಷಣೆಗೆ ಎಲ್ಲಾ ಜನಪರ ಸಂಘಟನೆಗಳು ಒಗ್ಗೂಡಿ ಹೋರಾಟ ಮುಂದುವರಿಸಲಿವೆ ಎಂದು ತಿಳಿಸಿವೆ.

ಈ ಪ್ರತಿಭಟನೆ ಹಾಗೂ ಮನವಿ ಸಲ್ಲಿಕೆ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಸದಸ್ಯೆ ಆರತಿ ಶಹಾಪುರ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ರಮೇಜಾ ನಧಾಫ್, ಸುರೇಶ ಬಿಜಾಪುರ, ಎಸ್‌ಡಿಪಿಐ ಜಿಲ್ಲಾ ಅಧ್ಯಕ್ಷ ಅತ್ತಾಉಲ್ಲಾ ದ್ರಾಕ್ಷಿ, ಎಸ್‌ಯುಸಿಐ ಮುಖಂಡ ಬಿ. ಭಗವಾನ ರೆಡ್ಡಿ, ಸಿದ್ದಲಿಂಗ ಬಾಗೇವಾಡಿ, ಭರತಕುಮಾರ, ಶಿವಬಾಳಮ್ಮ, ಆಪ್ ಪಕ್ಷದ ಜಿಲ್ಲಾ ಅಧ್ಯಕ್ಷ ಭೋಗೆಶ ಸೊಲ್ಲಾಪುರ ಸೇರಿದಂತೆ ಕಾಂಗ್ರೆಸ್ ಹಾಗೂ ವಿವಿಧ ಸಂಘಟನೆಗಳ ಮುಖಂಡರಾದ ವಸಂತ ಹೊನಮೊಡೆ, ಚಾಂದಸಾಬ ಗಢಗಲಾವ, ಮೈಬೂಬ ಕಲಾದಗಿ, ಲಾಲಸಾಬ ಕೊರಬು, ಅಶೋಕ್ ಬಜಂತ್ರಿ, ಎಂ.ಎಂ. ಮುಲ್ಲಾ, ಗಿರೀಶ್ ಇಟ್ಟಗಿ, ಮಾರುತಿ ಬಂಡಿ, ಫಯಾಜ್ ಕಲಾದಗಿ, ದಸ್ತಗೀರ್ ಸಾಲೋಟಗಿ, ತಾಜೋದ್ದೀನ್ ಖಲೀಫಾ, ರಜಾಕ್ ಕಾಖಂಡಕಿ, ಎಜಾಜ್ ಮಕಬೀಲ್, ಮಂಜುಳಾ ಗಾಯಕವಾಡ, ಸವಿತಾ ಧನರಾಜ, ಹಮೀದಾ ಪಟೇಲ್, ಹಾಜಿ ಪಿಂಜಾರ, ದೇಸು ಚವ್ಹಾಣ ಹಾಗೂ ಭಾರತಿ ನಾವಿ ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001